ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: 04 Vol: | ಸಂಚಿಕೆ: 97 Issue: | ರಾಯಚೂರು Raichur | 29-09-2026 | ಮಂಗಳವಾರ Tuesday | ಪುಟ: 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685

## ಒಂದೇ ದಿನ ಆರು ಭರ್ಜರಿ ಶತಕ: ಕ್ರಿಕೆಟ್ ಇತಿಹಾಸದಲ್ಲೇ ಇದೊಂದು ಐತಿಹಾಸಿಕ ದಾಖಲೆ!



## ಇ-ಚಲನ್ ಬಾಕಿ ವಸೂಲಿಗೆ ವಿದ್ಯುತ್ ಬಿಲ್ ಸಂಪರ್ಕಿಸುವ ಮಾರ್ಗ ಪರಿಶೀಲಿಸಿ: ಸುಪ್ರೀಂ ಕೋರ್ಟ್ ಸಲಹೆ

ನವದೆಹಲಿ: ಸಂಚಾರ ನಿಯಮ ಉಲ್ಲಂಘನೆಗೆ ವಿಧಿಸಲಾದ ಇ-ಚಲನ್ ದಂಡವನ್ನು ದೀರ್ಘಕಾಲ ಬಾಕಿ ಉಳಿಸಿಕೊಂಡಿರುವವರಿಂದ ಮೊತ್ತ ವಸೂಲಿ ಮಾಡಲು ಪರಿಣಾಮಕಾರಿ ಕ್ರಮಗಳನ್ನು ರೂಪಿಸುವ ಅಗತ್ಯವಿದ್ದು, ಬಾಕಿ ದಂಡವನ್ನು ವಿದ್ಯುತ್ ಬಿಲ್‌ಗಳೊಂದಿಗೆ ಸಂಪರ್ಕಿಸುವಂತಹ ಮಾರ್ಗಗಳನ್ನೂ ಪರಿಗಣಿಸಬಹುದು ಎಂದು ಸುಪ್ರೀಂ ಕೋರ್ಟ್ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಸಲಹೆ ನೀಡಿದೆ.

ಸಾಮಾಜಿಕ ಕಾರ್ಯಕರ್ತ ಎಸ್. ರಾಜಶೇಖರನ್ ಅವರು ರಸ್ತೆ ಸುರಕ್ಷತೆಗೆ ಸಂಬಂಧಿಸಿ 2012ರಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಜೆ.ಬಿ. ಪಾರ್ದಿವಾಲಾ ಮತ್ತು ನ್ಯಾಯಮೂರ್ತಿ ಕೆ.ವಿ. ವಿಶ್ವನಾಥನ್



ಅವರ ಪೀಠ, ಇ-ಚಲನ್ ನೀಡುವುದಷ್ಟೇ ಸಾಕಾಗುವುದಿಲ್ಲ; ವಿಧಿಸಲಾದ ದಂಡವನ್ನು ಪರಿಣಾಮಕಾರಿಯಾಗಿ ವಸೂಲಿ ಮಾಡುವ ವ್ಯವಸ್ಥೆಯೂ ಇರಬೇಕು ಎಂದು ಅಭಿಪ್ರಾಯಪಟ್ಟಿತು.

ವಿಚಾರಣೆ ವೇಳೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಇ-ಚಲನ್‌ಗಳ ಮೂಲಕ ಸುಮಾರು ₹45 ಸಾವಿರ ಕೋಟಿ ವಸೂಲಿಯಾಗಬೇಕಿದ್ದು, ಅದರಲ್ಲಿ ಸುಮಾರು ₹25 ಸಾವಿರ ಕೋಟಿ ಮಾತ್ರ ಈವರೆಗೆ ವಸೂಲಿಯಾಗಿದೆ ಎಂದು ನ್ಯಾಯಾಲಯಕ್ಕೆ ಮಾಹಿತಿ ನೀಡಲಾಯಿತು.

ಬಾಕಿ ದಂಡದ ವಸೂಲಿಗೆ ವಾಸ್ತವಿಕ ಹಾಗೂ ಅನುಷ್ಠಾನಕ್ಕೆ ಯೋಗ್ಯವಾದ ಮಾರ್ಗಗಳನ್ನು ಅಧಿಕಾರಿಗಳು ಕಂಡುಕೊಳ್ಳಬೇಕು ಎಂದು ಪೀಠ ಸೂಚಿಸಿತು. ಇ-ಚಲನ್ ಮೊತ್ತವನ್ನು ಪಾವತಿಸದಿದ್ದಲ್ಲಿ ಅದನ್ನು ವಿದ್ಯುತ್ ಬಿಲ್‌ನ ಬಾಕಿಯೊಂದಿಗೆ ಸೇರಿಸುವ ವ್ಯವಸ್ಥೆ ಸಾಧ್ಯವೇ ಎಂಬುದನ್ನೂ ಪರಿಶೀಲಿಸಬಹುದು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿತು.

ಇದೇ ವೇಳೆ ದೊಡ್ಡ ಮೊತ್ತದ ಇ-ಚಲನ್ ಬಾಕಿ ಇರುವ ವಾಹನಗಳನ್ನು ರಸ್ತೆ ತಪಾಸಣೆ ವೇಳೆ ಗುರುತಿಸಿ ಜಪ್ತಿ ಮಾಡುವ ಸಾಧ್ಯತೆಯ ಬಗ್ಗೆಯೂ ಪೀಠ ಚರ್ಚಿಸಿತು.

ಚಲನ್ ಬಾಕಿ ಉಳಿಸಿಕೊಂಡಿರುವ ವಾಹನ ಮಾಲೀಕರ ಚಾಲನಾ ಪರವಾನಗಿ ಅಮಾನತುಗೊಳಿಸುವುದು, 2ನೇ ಪುಟಕ್ಕೆ

## ಬರ ಪರಿಹಾರಕ್ಕಾಗಿ ಸರ್ವಪಕ್ಷ ನಿಯೋಗದೊಂದಿಗೆ ಪ್ರಧಾನಿ ಭೇಟಿ: ಡಿ.ಕೆ. ಶಿವಕುಮಾರ್

ನವದೆಹಲಿ: ಕರ್ನಾಟಕದಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ರಾಜ್ಯದ 200ಕ್ಕೂ ಹೆಚ್ಚು ತಾಲೂಕುಗಳು ಬರದ ಪರಿಣಾಮ ಎದುರಿಸುತ್ತಿವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ರೈತರು ಬೆಳೆ ನಷ್ಟ, ನೀರಿನ ಕೊರತೆ ಹಾಗೂ ಇತರೆ ಸಮಸ್ಯೆಗಳನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರದಿಂದ ಹೆಚ್ಚಿನ ನೆರವು ಪಡೆಯಲು ಸರ್ವಪಕ್ಷ ನಿಯೋಗದೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲು ಸಮಯ ಕೋರಿರುವುದಾಗಿ ಅವರು ಸೋಮವಾರ ತಿಳಿಸಿದ್ದಾರೆ. ಪ್ರಸ್ತುತ ರಾಜ್ಯದಲ್ಲಿ 177 ತಾಲೂಕುಗಳನ್ನು ಅಧಿಕೃತವಾಗಿ ಬರಪೀಡಿತವೆಂದು ಘೋಷಿಸಲಾಗಿದ್ದು, ಸಂಖ್ಯೆ 200 ದಾಟುವ ಸಾಧ್ಯತೆ ಇದೆ ಎಂದು ಸರ್ಕಾರ ಹೇಳಿದೆ.



ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಿವಕುಮಾರ್, ಬರ ಪರಿಹಾರದ ಜೊತೆಗೆ ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶಗಳಿಗೆ ಸಂಬಂಧಿಸಿದ ಕಸ್ತೂರಿರಂಗನ್ ಸಮಿತಿ ವರದಿಯ ವಿಷಯವನ್ನೂ ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಲಾಗುವುದು ಎಂದು ಹೇಳಿದರು. ರಾಜ್ಯ 2ನೇ ಪುಟಕ್ಕೆ

## ಬರ ಪರಿಹಾರ, ನೀರಾವರಿ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಜೆಡಿಎಸ್ ಪ್ರತಿಭಟನೆ

### ಕೆಬಿಜೆಎನ್‌ಎಲ್ ವಿಭಾಗ ಸಂಖ್ಯೆ6ರ ಕಚೇರಿಯನ್ನು ಯಾವುದೇ ಕಾರಣಕ್ಕೂ ಸ್ಥಳಾಂತರಿಸಬಾರದು

ದೇವದುರ್ಗ, ಸೆ.28: ದೇವದುರ್ಗ ಹಾಗೂ ಅರಕೇರಾ ತಾಲೂಕುಗಳಲ್ಲಿ ತೀವ್ರಗೊಂಡಿರುವ ಬರ ಪರಿಸ್ಥಿತಿಗೆ ತುರ್ತಾಗಿ ಸ್ಪಂದಿಸಿ ಪರಿಹಾರ ಕಾಮಗಾರಿಗಳನ್ನು ಆರಂಭಿಸಬೇಕು, ರೈತರಿಗೆ ಸಮರ್ಪಕ ಬೆಳೆ ಪರಿಹಾರ ನೀಡಬೇಕು ಹಾಗೂ ನೀರಾವರಿ ವ್ಯವಸ್ಥೆಯನ್ನು ಸುಧಾರಿಸಬೇಕು ಎಂದು ಆಗ್ರಹಿಸಿ ಜನತಾದಳ (ಜಾತ್ಯತೀತ) ಪಕ್ಷದ ವತಿಯಿಂದ ಭಾನುವಾರ ದೇವದುರ್ಗದಲ್ಲಿ ಪ್ರತಿಭಟನೆ ನಡೆಸಲಾಯಿತು.

ಜೆಡಿಎಸ್ ಮುಖಂಡರು, ಕಾರ್ಯಕರ್ತರು ಹಾಗೂ ರೈತರು ನಗರದ ಜಹೀರುದ್ದೀನ್ ವೃತ್ತದಿಂದ ಮೆರವಣಿಗೆ ಆರಂಭಿಸಿ, ಪ್ರಮುಖ ರಸ್ತೆಗಳಲ್ಲಿ ಸಾಗುತ್ತಾ ಚುಂಗಿ ಎಂದೇ ಕರೆಯಲಾಗುವ ಡಾ. ಬಿ.ಆರ್. ಅಂಬೇಡ್ಕರ್ ವೃತ್ತಕ್ಕೆ ತಲುಪಿದರು. ಅಲ್ಲಿ ಧರಣಿ ನಡೆಸಿ ಬರ, ನೀರಾವರಿ, ಕುಡಿಯುವ ನೀರು ಹಾಗೂ ರೈತರ ಸಮಸ್ಯೆಗಳಿಗೆ ಸರ್ಕಾರ ತಕ್ಷಣ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ದೇವದುರ್ಗ ತಾಲೂಕು ಜೆಡಿಎಸ್ ಅಧ್ಯಕ್ಷ ಬಸನಗೌಡ ದೇಸಾಯಿ ಮಾತನಾಡಿ, ಅರಕೇರಾ ತಾಲೂಕಿನಲ್ಲಿ ಬರ ಪರಿಸ್ಥಿತಿ ಗಂಭೀರವಾಗಿದ್ದು, ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿಗೂ ತೊಂದರೆ ಎದುರಾಗಿದೆ. ಸುಮಾರು 95 ಕಿ.ಮೀ. ವ್ಯಾಪ್ತಿಯ ಕಾಲುವೆ ವ್ಯವಸ್ಥೆಯಿಂದ ಅಂದಾಜು 1.14 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ದೊರೆಯುತ್ತಿದೆ. ಇಂತಹ ಪ್ರಮುಖ ನೀರಾವರಿ ವ್ಯವಸ್ಥೆಗೆ ಸಂಬಂಧಿಸಿದ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಕ್ರಮ ಸರಿಯಲ್ಲ ಎಂದು ಆಕ್ಷೇಪಿಸಿದರು.

ಕಳೆದ ವರ್ಷವೇ ಕೆಬಿಎನ್‌ಎಲ್ ಅಧಿಕಾರಿಗಳು 15 ಮತ್ತು 16ನೇ ವಿತರಣಾ ಕಾಲುವೆಗಳ ಕಾಮಗಾರಿ ಪೂರ್ಣಗೊಂಡಿದೆ ಎಂಬ ಕಾರಣ ನೀಡಿ ಕಚೇರಿಯನ್ನು ರಾಯಚೂರಿಗೆ ಸ್ಥಳಾಂತರಿಸುವ ಕುರಿತು ತಿಳಿಸಿದ್ದರು. ಆದರೆ ರೈತರ ಹಿತದೃಷ್ಟಿಯಿಂದ ದೇವದುರ್ಗದಲ್ಲಿಯೇ ಸಂಬಂಧಿಸಿದ ಕಚೇರಿ ಕಾರ್ಯನಿರ್ವಹಿಸಬೇಕು. ಕಾಲುವೆಗಳ ನಿರ್ವಹಣೆ, ದುರಸ್ತಿ ಮತ್ತು ನೀರಿನ ಹಂಚಿಕೆ ಸಮಸ್ಯೆಗಳಿಗೆ ಸ್ಥಳೀಯ ಮಟ್ಟದಲ್ಲಿಯೇ ಪರಿಹಾರ ಸಿಗುವಂತಾಗಬೇಕು ಎಂದು ಆಗ್ರಹಿಸಿದರು.










ಜೆಡಿಎಸ್ ಮುಖಂಡ ಹಾಗೂ ಮಾಜಿ ಸಚಿವ ನಾಡಗೌಡ ಮಾತನಾಡಿ, ಕಳೆದ 45 ವರ್ಷಗಳ ರಾಜಕೀಯ ಜೀವನದಲ್ಲಿ ಇಂತಹ ಪರಿಸ್ಥಿತಿ ನೋಡಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಟೀಕೆ ಮಾಡಿದರು. ಜನರಿಗೆ ಕೇವಲ ಭರವಸೆಗಳಿಗಿಂತ ಕೃಷಿಗೆ ಗುಣಮಟ್ಟದ ವಿದ್ಯುತ್, ಬೆಳೆಗಳಿಗೆ ಅಗತ್ಯ ನೀರು ಮತ್ತು ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ನೀಡುವುದು ಮುಖ್ಯ ಎಂದು ಹೇಳಿದರು.

ಹಿಂದಿನ ಎಚ್.ಡಿ. ಕುಮಾರಸ್ವಾಮಿ ನೇತೃತ್ವದ ಸರ್ಕಾರ ರೈತರ ಸಾಲ ಮನ್ನಾ ಮಾಡಿತ್ತು ಎಂದು ಉಲ್ಲೇಖಿಸಿದ ಅವರು, ರೈತರ ಆರ್ಥಿಕ ಸಂಕಷ್ಟ ನಿವಾರಿಸಲು ಪ್ರಸ್ತುತ ಸರ್ಕಾರವೂ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. 2028ರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಅಧಿಕಾರಕ್ಕೆ ಬರಲಿದೆ ಹಾಗೂ ಎಚ್.ಡಿ. ಕುಮಾರಸ್ವಾಮಿ ಮುಖ್ಯಮಂತ್ರಿ ಆಗಲಿದ್ದಾರೆ ಎಂದು ನಾಡಗೌಡ ರಾಜಕೀಯ ಹೇಳಿಕೆ ನೀಡಿದರು.

ಶಾಸಕಿ ಜಿ. ಕರಿಯಮ್ಮ ಜಿ. ನಾಯಕ ಮಾತನಾಡಿ, ದೇವದುರ್ಗದಲ್ಲಿರುವ ಕೆಬಿಜೆಎನ್‌ಎಲ್ ವಿಭಾಗ ಸಂಖ್ಯೆ 6ರ ಕಚೇರಿಯನ್ನು ಯಾವುದೇ ಕಾರಣಕ್ಕೂ ಸ್ಥಳಾಂತರಿಸಬಾರದು ಎಂದು ಒತ್ತಾಯಿಸಿದರು. ರೈತರ ಸೇವೆ ಮಾಡಲು ತಾವು ರಾಜಕೀಯಕ್ಕೆ ಬಂದಿದ್ದು, ಅಧಿಕಾರಿಗಳ ಮೂಲಕ ರೈತರಿಗೆ ತೊಂದರೆ ಉಂಟುಮಾಡುವ ಕೆಲಸ ನಡೆಯಬಾರದು ಎಂದರು.

ತಾಲೂಕಿನ ಕಾಲುವೆ ಕಾಮಗಾರಿಗಳ ಸ್ಥಿತಿಗತಿ ಏನು, ರೈತರಿಗೆ ಎಷ್ಟು ಅನುಕೂಲವಾಗಿದೆ ಎಂಬುದನ್ನು ಸರ್ಕಾರ ಮೊದಲು ಪರಿಶೀಲಿಸಬೇಕು. ಎಇಇ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳಿಂದ ವಾಸ್ತವಿಕ ವರದಿ ಪಡೆದು ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಹಿಂದಿನ ಶಾಸಕರ ಅವಧಿಯಲ್ಲಿ ಅಧಿಕಾರಿಗಳು ಹೇಗೆ ಕಾರ್ಯನಿರ್ವಹಿಸಿದ್ದರು ಎಂಬುದನ್ನೂ ಗಮನಿಸಬೇಕಾಗಿದೆ ಎಂದರು.

ಬರ ಪರಿಸ್ಥಿತಿ ಕುರಿತು ಕೃಷಿ ಇಲಾಖೆ ಅಧಿಕಾರಿಗಳು ನೀಡಿದ 2ನೇ ಪುಟಕ್ಕೆ

## ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆ, ಬಂಧನಕ್ಕೆ ಆಗ್ರಹಿಸಿ ಕಾಂಗ್ರೆಸ್ ಧರಣಿ

ರಾಯಚೂರು: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ರಾಜೀನಾಮೆ ನೀಡಬೇಕು ಹಾಗೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಬಂಧಿಸಬೇಕು ಎಂದು ಆಗ್ರಹಿಸಿ ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸೋಮವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನಾ ಧರಣಿ ನಡೆಸಲಾಯಿತು.

ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಪ್ರತಿಭಟನೆಯಲ್ಲಿ ಪಕ್ಷದ ಮುಖಂಡರು, ವಿವಿಧ ಘಟಕಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪಾಲ್ಗೊಂಡು ಕೇಂದ್ರ ಸರ್ಕಾರ, ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿದರು. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆ) ೯ ಪ್ರಕ್ರಿಯೆಯ ಬಗ್ಗೆ ಕಾಂಗ್ರೆಸ್ ದೇಶದ ವಿವಿಧೆಡೆ




ಆಕ್ಷೇಪ ವ್ಯಕ್ತಪಡಿಸುತ್ತಿದ್ದು, ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆಗಳನ್ನು ನಡೆಸುತ್ತಿದೆ.

ಪ್ರತಿಭಟನಾಕಾರರು ಎಸ್‌ಐರ್ಆ ಪ್ರಕ್ರಿಯೆಯ ಹೆಸರಿನಲ್ಲಿ ಅರ್ಹ ಮತದಾರರ ಹಕ್ಕುಗಳಿಗೆ ಧಕ್ಕೆಯಾಗುತ್ತಿದೆ ಎಂದು ಆರೋಪಿಸಿದರು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮತ್ತು ತೆಗೆದುಹಾಕುವ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಹಾಗೂ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಚುನಾವಣಾ ಆಯೋಗ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು 2ನೇ ಪುಟಕ್ಕೆ

## ಅ. 4ರಂದು ಬರ ಅಧ್ಯಯನಕ್ಕಾಗಿ ಜಿಲ್ಲೆಗೆ ಕೇಂದ್ರ ತಂಡ ಭೇಟಿ ನೀಡುವ ಸಾಧ್ಯತೆ: ಪೂವಿತಾ ಎಸ್.

ರಾಯಚೂರು ಸೆಪ್ಟಂಬರ್ 28 (ಕರ್ನಾಟಕ ವಾರ್ತೆ): ಅಕ್ಟೋಬರ್ ಮೊದಲ ವಾರದಲ್ಲಿ ಬರ ಅಧ್ಯಯನಕ್ಕಾಗಿ ಕೇಂದ್ರ ತಂಡ ರಾಜ್ಯಕ್ಕೆ ಆಗಮಿಸಲಿದ್ದು, ಮೊದಲನೇಯ ಹಂತದಲ್ಲಿ ಬರ ಪೀಡಿತ ಎಂದು ಘೋಷಣೆಯಾದ ರಾಯಚೂರು ಜಿಲ್ಲೆಯ ತಾಲೂಕುಗಳಿಗೆ ಅಕ್ಟೋಬರ್ 4ರಂದು ಭೇಟಿ ನೀಡುವ ಸಾಧ್ಯತೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸೆಪ್ಟಂಬರ್ 28ರ ಸೋಮವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರೈತ ಮುಖಂಡರ ಹಾಗೂ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೋಳ ಖರಿದಿ ಕೇಂದ್ರದ ಬಾಕಿ ಇರುವ ಬಿಲ್‌ಗಳನ್ನು ಒಂದು ವಾರದೊಳಗೆ ಬಾಕಿ ಇರುವ ರೈತರ ಜೋಳ ಖರೀದಿಯ ಮೊತ್ತವನ್ನು



ಪಾವತಿಸಲಾಗುವುದು. ಕಂದಾಯ ಇಲಾಖೆ, ಪೋಲಿಸ್ ಇಲಾಖೆ ಹಾಗೂ ಪಂಚಾಯತ್ ರಾಜ್ ಇಲಾಖೆ ಈ ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕೊನೆಯ ಭಾಗದ ರೈತರಿಗೆ ನೀರು ತಲುಪವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ವಿಭಾಗವಾರು ತುಂಗಭದ್ರಾ ಎಡದಂಡೆ ಕಾಲುವೆಯ ಹೂಳು ತೆಗೆಯಲು ಎಷ್ಟಮೆಂಟ್ ಸಲ್ಲಿಸಬೇಕು. ಜಿಲ್ಲೆಯ ಎಲ್ಲಾ ರೈತರು ಸಂಕಷ್ಟದಲ್ಲಿದ್ದಾರೆ ಈ ಸಮಯದಲ್ಲಿ ಮೇಲ್ಭಾಗ ಹಾಗೂ ಕೆಳಭಾಗದ ರೈತರು ಒಗ್ಗಟ್ಟಿನೊಂದಿಗೆ ಸಹಕರಿಸಬೇಕು ಎಂದರು.

ನಾರಾಯಣಪೂರ ಬಲದಂಡೆ ಕಾಲುವೆಯ ಸಮಸ್ಯಗಳನ್ನು ಮುಖ್ಯ ಇಂಜಿನಿಯರ್ ಕೆಬಿಜೆಎನಎಲ್ ಭೀಮರಾಯನಗುಡಿ ಹಾಗೂ ನಾರಾಯಣಪೂರ ಜಲಾಶಯ ಇವರಗಳೊಂದಿಗೆ ಸಭೆ ಮಾಡಿ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು. ಅಲ್ಲದೆ ಪಶು ವೈದ್ಯಕೀಯ ಇಲಾಖೆಯಲ್ಲಿರುವ ವೈದ್ಯರ ಹುದ್ದೆ ಖಾಲಿ ಇರುವ ಕುರಿತು ಹಾಗೂ ಇತರೆ ಸಮಸ್ಯೆಗಳ ಕುರಿತು ಸರಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದರು.

ಮುಗಾರು ಮಳೆಯ 2ನೇ ಪುಟಕ್ಕೆ

## ಬರ ಪರಿಹಾರಕ್ಕೆ ಆಗ್ರಹಿಸಿ ಸೆ.30ರಂದು ಜೆಡಿಎಸ್ ಪ್ರತಿಭಟನೆ



ರಾಯಚೂರು: ಬರ ಪರಿಸ್ಥಿತಿಯಿಂದ ಸಂಕಷ್ಟ ಎದುರಿಸುತ್ತಿರುವ ರೈತರಿಗೆ ಪ್ರತಿ ಎಕರೆಗೆ ₹25 ಸಾವಿರ ಬೆಳೆ ಪರಿಹಾರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಸೆ.30ರಂದು ಜನತಾದಳ (ಜಾತ್ಯತೀತ) ಪಕ್ಷದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ರಾಯಚೂರು ಗ್ರಾಮೀಣ ಜೆಡಿಎಸ್ ಮುಖಂಡ ಸಣ್ಣ ನರಸಿಂಹ ನಾಯಕ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಬೇಡಿಕೆಗಳ ಮನವಿ ಸಲ್ಲಿಸಲಾಗುವುದು ಎಂದರು.

ಬರದಿಂದಾಗಿ ರೈತರು ಬೆಳೆ ನಷ್ಟ ಅನುಭವಿಸಿ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಇಂತಹ ಸಂದರ್ಭದಲ್ಲಿ ರೈತರಿಗೆ ನೀಡಲಾಗುತ್ತಿರುವ ₹2,500 ಪರಿಹಾರ ಅತ್ಯಂತ ಕಡಿಮೆಯಾಗಿದ್ದು, ಕೃಷಿಗೆ ಅಗತ್ಯವಿರುವ ಗೊಬ್ಬರ ಖರೀದಿಗೂ ಈ ಹಣ ಸಾಕಾಗುವುದಿಲ್ಲ ಎಂದು ಅವರು ಟೀಕಿಸಿದರು.

ಬರದಿಂದ ಹಾನಿಗೊಳಗಾದ ರೈತರಿಗೆ ಪ್ರತಿ ಎಕರೆಗೆ ₹25 2ನೇ ಪುಟಕ್ಕೆ

## ವಾಲ್ಮೀಕಿ ವಿವಿ ಆಡಳಿತದ ಆರೋಪಗಳಿಗೆ ದಾಖಲೆ ಸಹಿತ ಸ್ಪಷ್ಟನೆ ನೀಡಲು ಆಗ್ರಹ



ರಾಯಚೂರು, ಸೆ.28: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಡಿಜಿಟಲ್ ಮೌಲ್ಯಮಾಪನ ವ್ಯವಸ್ಥೆ, ತಾತ್ಕಾಲಿಕ ಸಿಬ್ಬಂದಿ ನೇಮಕ, ಹೆಚ್ಚುವರಿ ಹುದ್ದೆಗಳ ಜವಾಬ್ದಾರಿ ಹಂಚಿಕೆ ಹಾಗೂ ಹಣಕಾಸು ನಿರ್ವಹಣೆಯಲ್ಲಿ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂಬ ಆರೋಪಗಳಿಗೆ ಸಂಬಂಧಿಸಿ ಆ.7ರಂದು ಸಲ್ಲಿಸಿದ ಮನವಿಗೆ ಇದುವರೆಗೂ ಯಾವುದೇ ಉತ್ತರ ನೀಡಿಲ್ಲ ಎಂದು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹೋರಾಟ ಸಮಿತಿ ಅಧ್ಯಕ್ಷ ರವಿಗೌಡ ಮೀರಾಪೂರು ಆರೋಪಿಸಿದರು.

ನಗರದ ಪತ್ರಿಕಾಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವವಿದ್ಯಾಲಯದ ವಿರುದ್ಧ ನಡೆಸುತ್ತಿರುವ ಹೋರಾಟ ಯಾವುದೇ ವ್ಯಕ್ತಿಯನ್ನು ಗುರಿಯಾಗಿಸಿಕೊಂಡಿಲ್ಲ. ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಎಂಬುದಷ್ಟೇ ನಮ್ಮ ಉದ್ದೇಶ. ಎಲ್ಲ ಪ್ರಕ್ರಿಯೆಗಳು ನಿಯಮಬದ್ಧವಾಗಿ ನಡೆದಿದ್ದರೆ ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಬಹಿರಂಗಪಡಿಸಿ ಸಾರ್ವಜನಿಕರ ಮುಂದಿರುವ ಅನುಮಾನಗಳಿಗೆ ತೆರೆ ಎಳೆಯಬೇಕು ಎಂದು ಒತ್ತಾಯಿಸಿದರು.

ವಿಟಿಯು ಅಭಿವೃದ್ಧಿಪಡಿಸಿರುವ ಒಡೆಸ್ ವ್ಯವಸ್ಥೆಯನ್ನು ಬಳಸುವ ಬದಲು ಖಾಸಗಿ ಸಂಸ್ಥೆಗೆ ಡಿಜಿಟಲ್ ಮೌಲ್ಯಮಾಪನದ ಹೊಣೆ ನೀಡಿರುವ ಬಗ್ಗೆ ಸ್ಪಷ್ಟನೆ 2ನೇ ಪುಟಕ್ಕೆ

## ನೂತನ ಬಸವೇಶ್ವರ ವೃತ್ತ ನಿರ್ಮಾಣ ಸ್ಥಳ ಪರಿಶೀಲಿಸಿದ ಎನ್.ಎಸ್. ಬೋಸರಾಜು

ಮಾನ್ವಿ: ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಶ್ರೀ ಜಗಜ್ಯೋತಿ ಬಸವೇಶ್ವರ ವೃತ್ತದ ಸ್ಥಳವನ್ನು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಪರಿಶೀಲಿಸಿದರು.



ಪಟ್ಟಣದ ಬಸವ ವೃತ್ತಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ ಅವರು, ನಂತರ ತಾಲೂಕು ಪಂಚಾಯಿತಿ ಹಾಗೂ ತೋಟಗಾರಿಕೆ ಇಲಾಖೆಯ ಮುಂಭಾಗದಲ್ಲಿರುವ ಸರ್ಕಾರಿ ಸ್ಥಳವನ್ನು ವೀಕ್ಷಿಸಿದರು. ಈ ಸ್ಥಳದಲ್ಲಿ ಭವ್ಯವಾದ ಶ್ರೀ ಜಗಜ್ಯೋತಿ ಬಸವೇಶ್ವರ ವೃತ್ತವನ್ನು ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೆಆರ್‌ಡಿಸಿಎಲ್ ಅಧಿಕಾರಿಗಳಿಗೆ ಸೂಚಿಸಿದರು.

ವೃತ್ತದ ನಿರ್ಮಾಣ ಕಾರ್ಯವನ್ನು ಯೋಜಿತವಾಗಿ ಕೈಗೊಂಡು ಪಟ್ಟಣದ ಪ್ರಮುಖ ಆಕರ್ಷಣೆಯಾಗಿ ರೂಪಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ನಿರ್ಮಾಣಕ್ಕೆ ಅಗತ್ಯವಿರುವ ಸಹಕಾರವನ್ನು ನೀಡುವಂತೆ ಲೋಕೋಪಯೋಗಿ ಇಲಾಖೆ, ತಾಲೂಕು ಪಂಚಾಯಿತಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ, ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, 2ನೇ ಪುಟಕ್ಕೆ

# ಸೆ. 30ರಂದು ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

ರಾಯಚೂರು ಸೆಪ್ಟಂಬರ್ 28 (ಕರ್ನಾಟಕ ವಾರ್ತೆ): ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2026-27ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟಂಬರ್ 30ರಂದು ವಿವಿಧ ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿದ್ದು, ಆಸಕ್ತ ಕ್ರೀಡಾಪಟ್ಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ವಿಭಾಗ ಮಟ್ಟದ ಹ್ಯಾಂಡಬಲ್, ಅಥ್ಲೇಟಿಕ್ಸ್, ಈಜು, ಜುಡೋ, ಟೆನ್ನಿಸ್, ಕೊಪ್ಪಳ ಜಿಲ್ಲೆಯಲ್ಲಿ ಟೇಕ್ವಾಂಡೋ, ನೆಟ್ ಬಾಲ್, ಕುಸ್ತಿ, ಕರಾಟೆ, ಬಾಲ್ ಬ್ಯಾಡ್ಮಿಂಟನ್, ಬಾಕ್ಸಿಂಗ್, ರಾಯಚೂರು ಜಿಲ್ಲೆಯಲ್ಲಿ ಬಾಸ್ಕೆಟ್ ಬಾಲ್, ಯೋಗ, ವಾಲಿಬಾಲ್, ಬೀದರ್ ಜಿಲ್ಲೆಯಲ್ಲಿ ಶಟಲ್ ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಯಾದಗಿರಿ ಜಿಲ್ಲೆಯಲ್ಲಿ ಭಾರ ಎತ್ತುವುದು, ಖೋ-ಖೋ, ಥ್ರೋಬಾಲ್, ಬಳ್ಳಾರಿ ಜಿಲ್ಲೆಯಲ್ಲಿ ಹಾಕಿ ಫುಟ್ ಬಾಲ್ ಹಾಗೂ ವಿಜಯನಗರ ಜಿಲ್ಲೆಯಲ್ಲಿ ಕಬಡ್ಡಿ, ವುಶು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಕಲಬುರಗಿ ವಿಭಾಗ ಮಟ್ಟದ ಜಿಲ್ಲೆಗಳ ಸ್ಪರ್ಧೆಗಳಿಗೆ ಸೆಪ್ಟಂಬರ್ 30ರ ಬೆಳಿಗ್ಗೆ 8:30 ಗಂಟೆಯೊಳಗಾಗಿ ಆಯಾ ಜಿಲ್ಲೆಗಳ ಜಿಲ್ಲಾ ಕಚೇರಿ/ಜಿಲ್ಲಾ ಕ್ರೀಡಾಂಗಣದಲ್ಲಿ ವರದಿ ಮಾಡಿಕೊಳ್ಳಬೇಕು. ಪ್ರಯಾಣ ಭತ್ಯೆಯನ್ನು ಕೆ-2 ಮೂಲಕ ಪಾವಿತಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೆ. 29ರಂದು ಪಾಲಿಕೆಯಿಂದ ದಸರಾ ಹಬ್ಬದ ಪೂರ್ವಭಾವಿ ಸಭೆ

ರಾಯಚೂರು ಸೆಪ್ಟಂಬರ್ 28 (ಕರ್ನಾಟಕ ವಾರ್ತೆ): ರಾಯಚೂರು ಮಹಾನಗರಪಾಲಿಕೆ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವು ಕೂಡ 2026-27ನೇ ಸಾಲಿನ ದಸರಾ ನಾಡ ಹಬ್ಬವನ್ನು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಅಧ್ಯಕ್ಷತೆಯಲ್ಲಿ ಸೆಪ್ಟಂಬರ್ 29ರ ಬೆಳಿಗ್ಗೆ 11ಗಂಟೆಗೆ ಪಾಲಿಕೆ ಜೋನಲ್-1 ಕಚೇರಿಯಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ರಾಯಚೂರು ನಗರದ ಸಂಘ ಸಂಸ್ಥೆ, ಎನ್.ಜಿ.ಓ.ಗಳು, ಚೇಂಬರ್ ಆಫ್ ಕಾರ್ಮಸ್, ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಅಧಿಕಾರಿಗಳು, ವಾರ್ತಾ ಇಲಾಖೆಯ ಅಧಿಕಾರಿಗಳು ಸದರಿ ಸಭೆಗೆ ಹಾಜರಾಗಿ ತಮ್ಮ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಿ ನಾಡ ಹಬ್ಬ ದಸರಾ ಪೂರ್ವಭಾವಿ ಸಭೆಯನ್ನು ಯಶಸ್ವಿಗೊಳಿಸುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವ ರೇಬಿಸ್ ದಿನಾಚರಣೆ: ಒಂದು ತಿಂಗಳ ಲಸಿಕೆ ಅಭಿಯಾನಕ್ಕೆ ಚಾಲನೆ

ಕೊಪ್ಪಳ, ಸೆಪ್ಟೆಂಬರ್ 28(ಕರ್ನಾಟಕ ವಾರ್ತೆ): ವಿಶ್ವ ರೇಬಿಸ್ ದಿನಾಚರಣೆ ಅಂಗವಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಜಿಲ್ಲಾ ಪಾಲಿಕ್ಲಿನಿಕ್, ಕೊಪ್ಪಳ ವತಿಯಿಂದ ನಾಯಿ ಮತ್ತು ಬೆಕ್ಕುಗಳಿಗೆ ಉಚಿತ ರೇಬಿಸ್ ಲಸಿಕಾ ಕಾರ್ಯಕ್ರಮವನ್ನು ಸೋಮವಾರದಂದು ಹಮ್ಮಿಕೊಳ್ಳಲಾಗಿತ್ತು.

ಕಲಬುರಗಿ ವಿಭಾಗದ ರಾಯಚೂರಿನ ಜಂಟಿ ನಿರ್ದೇಶಕರಾದ ಡಾ. ರಮೇಶದೊಡ್ಡಮನಿ ಅವರು ನಾಯಿ ಮತ್ತು ಬೆಕ್ಕುಗಳಿಗೆ ರೇಬಿಸ್ ನಿರೋಧಕ ಲಸಿಕೆಯನ್ನು ಹಾಕುವುದರ ಮೂಲಕ ಲಸಿಕಾ ಅಭಿಯಾನವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಡಾ. ಎಸ್. ಜಿ. ರೋಣ, ಉಪನಿರ್ದೇಶಕರು, ಜಿಲ್ಲಾ ಪಾಲಿಕ್ಲಿನಿಕ್, ಕೊಪ್ಪಳ, ಡಾ. ಚಂದ್ರಶೇಖರ ಜಿ. ಹಾಗೂ ಡಾ. ಯಮನಪ್ಪ ಬಿ. ಎಚ್., ಮುಖ್ಯ ಪಶು ವೈದ್ಯಾಧಿಕಾರಿಗಳು ಮತ್ತು ಕಛೇರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಲಸಿಕಾ ಕಾರ್ಯಕ್ರಮವು ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 27 ರವರೆಗೆ ನಡೆಯಲಿದ್ದು, ಉಚಿತವಾಗಿ ಲಸಿಕೆಯನ್ನು ಹಾಕಲಾಗುತ್ತದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08539-299906 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

**ಅಮೃತ ವಾಣಿ**

ಇನ್ನೊಬ್ಬರ ನೋವು ನಮಗೆ ಸಂತೋಷ ಆಗಬಾರದು.

1600 ನೇಯ ದಿನಕ್ಕೆ ಏಮ್ಸ್ ಹೋರಾಟ

# ಹತ್ತಿ-ಭತ್ತ ಖರೀದಿ ಕೇಂದ್ರ ಆರಂಭಕ್ಕೆ ರೈತ ಸಂಘ ಆಗ್ರಹ



ದೇವದುರ್ಗ: ತಾಲೂಕಿನ ಜಾಲಹಳ್ಳಿಯಲ್ಲಿ ಸರ್ಕಾರದ ವತಿಯಿಂದ ಹತ್ತಿ ಹಾಗೂ ಭತ್ತ ಖರೀದಿ ಕೇಂದ್ರಗಳನ್ನು ಕೂಡಲೇ ಆರಂಭಿಸಬೇಕು. ಅನಧಿಕೃತ ಖರೀದಿ ಕೇಂದ್ರಗಳ ವಿರುದ್ಧ ಕ್ರಮ ಕೈಗೊಂಡು, ಶೂಟ್ ಹೆಸರಿನಲ್ಲಿ ರೈತರ ಹತ್ತಿಯ ತೂಕ ಕಡಿತ ಮಾಡುವುದನ್ನು ಹಾಗೂ ನಕಲಿ ಬಿಲ್ ನೀಡುವುದನ್ನು ತಡೆಯಬೇಕು ಎಂದು ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘದ ಜಾಲಹಳ್ಳಿ ಗ್ರಾಮ ಸಮಿತಿ ವತಿಯಿಂದ ಸೋಮವಾರ ಎಪಿಎಂಸಿ ಅಧಿಕಾರಿಗಳು ಹಾಗೂ ತಹಶೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ಜಾಲಹಳ್ಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಲವು ಹತ್ತಿ ಖರೀದಿ ಕೇಂದ್ರಗಳಲ್ಲಿ ರೈತರಿಂದ ಶೂಟ್ ಹೆಸರಿನಲ್ಲಿ ತೂಕ ಕಡಿತ ಮಾಡಲಾಗುತ್ತಿದೆ ಹಾಗೂ ನಕಲಿ ಬಿಲ್ ನೀಡಲಾಗುತ್ತಿದೆ ಎಂಬ ದೂರುಗಳು ಕೇಳಿಬರುತ್ತಿವೆ. ಈ ಕುರಿತು ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಿ, ನಿಯಮ ಉಲ್ಲಂಘನೆ ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರೈತ ಸಂಘದ ಮುಖಂಡರು ಒತ್ತಾಯಿಸಿದರು.

ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಖರೀದಿ ಕೇಂದ್ರಗಳ ಪರವಾನಗಿ ಹಾಗೂ ದಾಖಲೆಗಳನ್ನು ಪರಿಶೀಲಿಸಿ, ತಪ್ಪುಗಳು ಕಂಡುಬಂದಲ್ಲಿ ಅಂತಹ ಅಂಗಡಿಗಳ ವಿರುದ್ಧ ಕ್ರಮ ಕೈಗೊಂಡು ಮುಚ್ಚಬೇಕು. ರೈತರ ಉತ್ಪನ್ನಗಳಿಗೆ ನ್ಯಾಯಸಮ್ಮತ ತೂಕ ಹಾಗೂ ಪಾರದರ್ಶಕ ಬಿಲ್ ವ್ಯವಸ್ಥೆ ಇರಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿಗೆ ಸ್ಪಂದಿಸಿದ ಅಧಿಕಾರಿಗಳು, ಜಾಲಹಳ್ಳಿಯ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುವುದು. ನಿಯಮ ಉಲ್ಲಂಘಿಸಿರುವುದು ಕಂಡುಬಂದಲ್ಲಿ ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು. ಜೊತೆಗೆ ಸರ್ಕಾರದ ವತಿಯಿಂದ ಹತ್ತಿ ಮತ್ತು ಭತ್ತ ಖರೀದಿ ಕೇಂದ್ರಗಳನ್ನು ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನರಸಣ್ಣ ನಾಯಕ, ಮೌನೇಶ ಜಾಲಹಳ್ಳಿ, ಹನುಮಂತ ಗುರಿಕಾರ, ಹನುಮಂತ ಮಡಿವಾಳ, ರಂಗನಾಥ ಬುಂಕಲದೊಡ್ಡಿ, ದುರುಗಪ್ಪ ಹೊರಟ್ಟಿ, ಬಸವರಾಜ ವಂದ್ಲಿ, ಮುಕ್ಕನಗೌಡ, ಹನುಮಂತ ಮಂಡಲಗುಡ್ಡ, ಸಿದ್ದಯ್ಯ ಗಲಗ್, ದುರುಗಪ್ಪ ಗಾಜಲದಿನ್ನಿ, ಪ್ರಾಣೇಶ ಗಾಜಲದಿನ್ನಿ, ನಾಗರಾಜ, ಭೀಮಣ್ಣ ಪಂದ್ಯಾನ ಸೇರಿದಂತೆ ರೈತ ಸಂಘದ ಮುಖಂಡರು ಉಪಸ್ಥಿತರಿದ್ದರು.

# ನೂತನ ಬಸವೇಶ್ವರ ವೃತ್ತ ನಿರ್ಮಾಣ ಸ್ಥಳ ಪರಿಶೀಲಿಸಿದ ಎನ್.ಎಸ್. ಬೋಸರಾಜು

ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ತಾಲೂಕು ಬಸವ ಸಮಿತಿಯ ಗೌರವಾಧ್ಯಕ್ಷ ಡಾ. ಬಸವಪ್ರಭು ಪಾಟೀಲ್, ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹರಿಹರ ಪಾಟೀಲ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಅಧ್ಯಕ್ಷ ಅರುಣಚಾಂದ್, ಮುಖಂಡರಾದ ಎ. ಬಾಲಸ್ವಾಮಿ ಕೊಡ್ಲಿ, ಸೈಯದ್ ಖಾಲಿದ್ ಖಾದ್ರಿ, ಮಹೇಶ್ ಗೌಡ ಗವಿಗಟ್, ಮಹಾಂತೇಶ ಸ್ವಾಮಿ, ಶಿವರಾಜ್ ಪಾಟೀಲ್ ಸಂಗಾಪುರ, ಸತ್ತಾರ್ ಬಂಗ್ಲೆವಾಲೆ, ರಸೂಲ್ ಖುರೇಶಿ, ಎಸ್.ಎಂ. ಪಾಟೀಲ್, ಕಾಮೇಶ್, ಹಂಪಯ್ಯ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಾಲ್ಮೀಕಿ ವಿವಿ ಆಡಳಿತದ ಆರೋಪಗಳಿಗೆ ದಾಖಲೆ ಸಹಿತ ಸ್ಪಷ್ಟನೆ ನೀಡಲು ಆಗ್ರಹ

ಅಗತ್ಯವಿದೆ. ಅಲ್ಲದೆ, 13 ತಾತ್ಕಾಲಿಕ ಹುದ್ದೆಗಳಿಗೆ ಸಿಬ್ಬಂದಿ ನೇಮಿಸಿ ₹40 ಸಾವಿರದಿಂದ ₹50 ಸಾವಿರದವರೆಗೆ ವೇತನ ನಿಗದಿಪಡಿಸಲಾಗಿದೆ ಎಂಬ ಆರೋಪವಿದೆ. ತಾಂತ್ರಿಕ ಹಾಗೂ ಹಣಕಾಸಿನಂತಹ ಮಹತ್ವದ ಜವಾಬ್ದಾರಿಗಳನ್ನು ಸೂಕ್ತ ಅರ್ಹತೆ ಮತ್ತು ಅನುಭವ ಹೊಂದಿರದವರಿಗೆ ವಹಿಸಲಾಗಿದೆ ಎಂಬ ಆರೋಪಗಳಿಗೂ ವಿಶ್ವವಿದ್ಯಾಲಯ ಆಡಳಿತ ಉತ್ತರಿಸಬೇಕು ಎಂದರು.

ತಾತ್ಕಾಲಿಕ ಸಿಬ್ಬಂದಿಯ ನೇಮಕಾತಿ ಆದೇಶಗಳು, ಹಣಕಾಸು ಸಮಿತಿ ಹಾಗೂ ಸಿಂಡಿಕೇಟ್ ಸಭೆಗಳ ನಿರ್ಣಯಗಳು, ನೇಮಕಗೊಂಡವರ ವಿದ್ಯಾರ್ಹತೆ ಮತ್ತು ಅನುಭವದ ದಾಖಲೆಗಳು, ಟೆಂಡರ್ ಪ್ರಕ್ರಿಯೆಯ ವಿವರ, ವೇತನ ಪಾವತಿ ಮಾಹಿತಿ, ಪಿಎಫ್‌ಇಎಸ್‌ಐಗೆ ಸಂಬಂಧಿಸಿದ ದಾಖಲೆಗಳು ಹಾಗೂ ಆಡಿಟ್ ಆಕ್ಷೇಪಣೆಗಳ ಪ್ರತಿಗಳನ್ನು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಒಬ್ಬರಿಗೇ ಹಲವು ಹೆಚ್ಚುವರಿ ಜವಾಬ್ದಾರಿಗಳನ್ನು ವಹಿಸಿರುವುದು ಮತ್ತು ಬೋಧನಾ ಸಿಬ್ಬಂದಿಯನ್ನು ಆಡಳಿತಾತ್ಮಕ ಕಾರ್ಯಗಳಿಗೆ ನಿಯೋಜಿಸಿರುವ ಬಗ್ಗೆಯೂ ಪರಿಶೀಲನೆ ನಡೆಯಬೇಕು. ತಾಂತ್ರಿಕ ಹಾಗೂ ಹಣಕಾಸು ವಿಭಾಗದ ಹುದ್ದೆಗಳಿಗೆ ನಿಗದಿತ ವಿದ್ಯಾರ್ಹತೆ ಮತ್ತು ಅನುಭವ ಹೊಂದಿರುವವರನ್ನು ಪಾರದರ್ಶಕ ಪ್ರಕ್ರಿಯೆಯ ಮೂಲಕ ನೇಮಕ ಮಾಡಬೇಕು ಎಂದು ಹೇಳಿದರು.

ಸಿಬ್ಬಂದಿಗೆ ಬಾಕಿ ಇರುವ ವೇತನವನ್ನು ವಿಳಂಬ ಮಾಡದೆ ಪಾವತಿಸಬೇಕು. ಪಿಎಫ್ ಹಾಗೂ ಇಎಸ್‌ಐ ಮೊತ್ತವನ್ನು ನಿಯಮಾನುಸಾರ ಜಮಾ ಮಾಡಬೇಕು. ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾಗುತ್ತಿರುವ ಅಕ್ರಮಗಳ ಕುರಿತು ಸ್ವತಂತ್ರ ತನಿಖೆ ನಡೆಸಿ, ತನಿಖೆಯಲ್ಲಿ ನಿಯಮ ಉಲ್ಲಂಘನೆ ಸಾಬೀತಾದಲ್ಲಿ ಜವಾಬ್ದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು ಎಂದು ರವಿಗೌಡ ಮೀರಾಪೂರು ಒತ್ತಾಯಿಸಿದರು.

ಆ.7ರಂದು ಸಲ್ಲಿಸಿದ ಮನವಿಯಲ್ಲಿರುವ ಪ್ರಶ್ನೆಗಳಿಗೆ ವಿಶ್ವವಿದ್ಯಾಲಯ ಆಡಳಿತ ಶೀಘ್ರವಾಗಿ ಸ್ಪಷ್ಟ ಉತ್ತರ ನೀಡಬೇಕು ಹಾಗೂ ಕೇಳಲಾಗಿರುವ ದಾಖಲೆಗಳನ್ನು ಬಹಿರಂಗಪಡಿಸಬೇಕು. ಇದಕ್ಕೆ ಸ್ಪಂದಿಸದಿದ್ದರೆ ಅ.5ರಂದು ವಿಶ್ವವಿದ್ಯಾಲಯದ ಎದುರು ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ರಮೇಶ್, ಮಹಾಲಿಂಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬರ ಪರಿಹಾರಕ್ಕೆ ಆಗ್ರಹಿಸಿ ಸೆ.30ರಂದು ಜೆಡಿಎಸ್ ಪ್ರತಿಭಟನೆ

ಸಾವಿರ ಬೆಳೆ ಪರಿಹಾರ ನೀಡಬೇಕು. ಕೃಷಿ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ಕೃಷಿ ಪಂಪ್ ಸೆಟ್‌ಗಳಿಗೆ ಪ್ರತಿದಿನ 12 ಗಂಟೆ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ಬರದ ಪರಿಣಾಮ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ ಇರುವುದರಿಂದ ಅಗತ್ಯವಿರುವ ಪ್ರದೇಶಗಳಲ್ಲಿ ಗೋಶಾಲೆಗಳನ್ನು ಆರಂಭಿಸಿ, ಸಮರ್ಪಕ ಮೇವು ಹಾಗೂ ನೀರಿನ ವ್ಯವಸ್ಥೆ ಮಾಡಬೇಕು. ರೈತರು ಬೆಳೆದ ಕೃಷಿ ಉತ್ಪನ್ನಗಳಿಗೆ ಸೂಕ್ತ ಬೆಂಬಲ ಬೆಲೆ ನಿಗದಿಪಡಿಸಿ ನ್ಯಾಯಯುತ ದರ ದೊರೆಯುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬರಪೀಡಿತ ಪ್ರದೇಶಗಳಲ್ಲಿ ಗ್ರಾಮೀಣ ಜನರಿಗೆ ಉದ್ಯೋಗದ ಕೊರತೆ ಉಂಟಾಗದಂತೆ ಉದ್ಯೋಗ ಖಾತ್ರಿ ಯೋಜನೆಯಡಿ 150 ದಿನಗಳ ಕೆಲಸ ಕಲ್ಪಿಸಬೇಕು. ಅಲ್ಪಾವಧಿ ಬೆಳೆಗಳನ್ನು ಬೆಳೆಯಲು ರೈತರಿಗೆ ಅನುಕೂಲವಾಗುವಂತೆ ವಿಶೇಷ ಪ್ಯಾಕೇಜ್ ಘೋಷಿಸಬೇಕು. ಬೆಳೆ ಹಾನಿಯ ಕುರಿತು ವೈಜ್ಞಾನಿಕವಾಗಿ ಸಮೀಕ್ಷೆ ನಡೆಸಿ ನೈಜ ನಷ್ಟದ ಆಧಾರದ ಮೇಲೆ ಪರಿಹಾರ ನಿಗದಿಪಡಿಸಬೇಕು ಎಂದು ಹೇಳಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ತ್ವರಿತವಾಗಿ ಸ್ಪಂದಿಸಿ ಬರ ಪರಿಹಾರ ಕಾರ್ಯಗಳನ್ನು ಚುರುಕುಗೊಳಿಸಬೇಕು. ರೈತರ ಹಿತದೃಷ್ಟಿಯಿಂದ ಅಗತ್ಯ ಕ್ರಮಗಳನ್ನು ವಿಳಂಬವಿಲ್ಲದೆ ಕೈಗೊಳ್ಳಬೇಕು ಎಂದು ಸಣ್ಣ ನರಸಿಂಹ ನಾಯಕ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ನಾಗಾರಾಜ್, ನರಸಪ್ಪ, ರಾಮನಗೌಡ ಏಗನೂರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆ, ಬಂಧನಕ್ಕೆ ಆಗ್ರಹಿಸಿ ಕಾಂಗ್ರೆಸ್ ಧರಣಿ

ಮಾತನಾಡಿ, ಚುನಾವಣಾ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸ ಉಳಿಯಬೇಕಾದರೆ ಆಯೋಗದ ಪ್ರತಿಯೊಂದು ಪ್ರಕ್ರಿಯೆಯೂ ಪಾರದರ್ಶಕವಾಗಿರಬೇಕು. ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಉದ್ಭವಿಸಿರುವ ಅನುಮಾನಗಳಿಗೆ ಚುನಾವಣಾ ಆಯೋಗ ಸಮರ್ಪಕ ಉತ್ತರ ನೀಡಬೇಕು. ಎಸ್‌ಐರ್ಆ ಪ್ರಕ್ರಿಯೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಅರ್ಹ ಮತದಾರರಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ನೋಡಿಕೊಳ್ಳಬೇಕು ಎಂದು ಆಗ್ರಹಿಸಿದರು.

ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಮಾತನಾಡಿ, ಚುನಾವಣಾ ಆಯೋಗವು ಕೇಂದ್ರ ಸರ್ಕಾರದ ಪರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಆರೋಪಿಸಿದರು. ಎಸ್‌ಐರ್ಆ ಪ್ರಕ್ರಿಯೆಯ ಮೂಲಕ ಕಾಂಗ್ರೆಸ್ ಪರವಾಗಿರುವ ಹಾಗೂ ಬಿಜೆಪಿಗೆ ವಿರೋಧವಾಗಿರುವ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಪ್ರಯತ್ನ ನಡೆಯುತ್ತಿದೆ ಎಂಬ ಆರೋಪವನ್ನು ಮುಂದಿಟ್ಟ ಅವರು, ಚುನಾವಣಾ ಆಯುಕ್ತರ ನೇಮಕಾತಿ ವ್ಯವಸ್ಥೆಯ ಮೇಲೂ ಕೇಂದ್ರ ಸರ್ಕಾರದ ಪ್ರಭಾವವಿದೆ ಎಂದು ದೂರಿದರು. ಮತದಾನದ ಹಕ್ಕು ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯ ರಕ್ಷಣೆಗಾಗಿ ಕಾಂಗ್ರೆಸ್ ತನ್ನ ಹೋರಾಟ ಮುಂದುವರಿಸಲಿದೆ ಎಂದರು.

ಎಸ್‌ಐರ್ಆ ಕುರಿತು ಕಾಂಗ್ರೆಸ್ ಇದೇ ರೀತಿಯ ಆರೋಪಗಳನ್ನು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿಯೂ ಮುಂದಿಟ್ಟಿದೆ. ಮತ್ತೊಂದೆಡೆ, ಚುನಾವಣಾ ಆಯೋಗವು ಎಸ್‌ಐಆರ್‌ಗೆ ಸಂಬಂಧಿಸಿದ ತನ್ನ ಆದೇಶಗಳು ಮತ್ತು ನಿರ್ಧಾರಗಳಿಗೆ ಕಾನೂನು ಮಾನ್ಯತೆ ಇದೆ ಹಾಗೂ ಆಯೋಗದೊಳಗಿನ ವಿಭಿನ್ನ ಅಭಿಪ್ರಾಯಗಳು ಸಾಂಸ್ಥಿಕ ಚರ್ಚೆಯ ಸಹಜ ಭಾಗವೆಂದು ಪ್ರತಿಪಾದಿಸಿದೆ.

ಪ್ರತಿಭಟನೆಯ ವೇಳೆ ಕಾಂಗ್ರೆಸ್ ಕಾರ್ಯಕರ್ತರೊಬ್ಬರು ಜ್ಞಾನೇಶ್ ಕುಮಾರ್ ಅವರ ಮುಖವಾಡ ಧರಿಸಿ, ಕೈಗೆ ಕೋಳ ಹಾಕಿಕೊಂಡು ವಿಭಿನ್ನ ರೀತಿಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದು ಗಮನ ಸೆಳೆಯಿತು. ಪ್ರತಿಭಟನಾಕಾರರು ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ಮತದಾರರ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಅಸ್ಲಾಂ ಪಾಷಾ, ಬಷೀರುದ್ದೀನ್, ಅಬ್ದುಲ್ ಕರೀಂ, ದಸ್ತಗೀ,ರ್ ಶ್ರೀದೇವಿ ನಾಯಕ, ಪವನ್ ಕುಮಾರ್ ಪಾಟೀಲ್, ಗಿರಿಯಪ್ಪ ನೆಲಹಾಳ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ನಿರ್ಮಲ ಬೆಣ್ಣೆ, ಬಿ. ಉಮಾ, ಕವಿತಾ, ಪ್ರತಿಭಾ ರೆಡ್ಡಿ, ವಂದನಾ ಶಿವಕುಮಾ,ರ್ ಜ್ಯೋತಿ ಎಸ್.ಎಂ. ಸೇರಿದಂತೆ ಕಾಂಗ್ರೆಸ್ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

## ಮೊದಲನೇ ಪುಟದಿಂದ

# ಇ-ಚಲನ್ ಬಾಕಿ ವಸೂಲಿಗೆ ವಿದ್ಯುತ್ ಬಿಲ್ ಸಂಪರ್ಕಿಸುವ ಮಾರ್ಗ ಪರಿಶೀಲಿಸಿ: ಸುಪ್ರೀಂ ಕೋರ್ಟ್ ಸಲಹೆ

ದಂಡ ಪಾವತಿಯಾಗುವವರೆಗೆ ವಾಹನದ ನೋಂದಣಿ ಪ್ರಮಾಣಪತ್ರ (RC) ನವೀಕರಣ, ಫಿಟ್‌ನೆಸ್ ಪ್ರಮಾಣಪತ್ರ ಹಾಗೂ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ (PUC) ನೀಡುವುದನ್ನು ನಿರ್ಬಂಧಿಸುವುದು, ನಕಲಿ ಆರ್‌ಸಿ ನೀಡುವುದನ್ನು ತಡೆಹಿಡಿಯುವುದು ಹಾಗೂ ವಾಹನದ ಮಾಲೀಕತ್ವ ವರ್ಗಾವಣೆಗೆ ನಿರ್ಬಂಧ ವಿಧಿಸುವಂತಹ ಕ್ರಮಗಳನ್ನೂ ಪರಿಗಣಿಸಬಹುದು ಎಂದು ಪೀಠ ಸಲಹೆ ನೀಡಿತು.

ಇದಲ್ಲದೆ, ಹೆಚ್ಚಿನ ಇ-ಚಲನ್ ಬಾಕಿ ಇರುವ ವಾಹನಗಳನ್ನು ಕೇಂದ್ರ ಸರ್ಕಾರದ ಪರಿವಾಹನ್ ಪೋರ್ಟಲ್ ನಲ್ಲಿ ಕಪ್ಪುಪಟ್ಟಿಗೆ ಸೇರಿಸುವ ಸಾಧ್ಯತೆಯನ್ನೂ ಪರಿಶೀಲಿಸುವಂತೆ ನ್ಯಾಯಾಲಯ ಸೂಚಿಸಿದೆ.

ಇ-ಚಲನ್ ದಂಡ ವಸೂಲಿಗೆ ಕಠಿಣ ವ್ಯವಸ್ಥೆ ರೂಪಿಸುವ ಕುರಿತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಪರಿಣಾಮಕಾರಿ ಕ್ರಮಗಳನ್ನು ಕಂಡುಕೊಳ್ಳಬೇಕು ಎಂಬುದೇ ನ್ಯಾಯಾಲಯದ ಪ್ರಮುಖ ಅಭಿಪ್ರಾಯವಾಗಿದ್ದು, ವಿದ್ಯುತ್ ಬಿಲ್ ಸಂಪರ್ಕಿಸುವುದು ಸೇರಿದಂತೆ ವಿಚಾರಣೆಯಲ್ಲಿ ಪ್ರಸ್ತಾಪವಾದ ಕ್ರಮಗಳು ಸಲಹೆಗಳಾಗಿವೆ, ಅಂತಿಮ ಆದೇಶವಲ್ಲ ಎಂಬುದನ್ನು ಗಮನಿಸಬೇಕು.

# ಬರ ಪರಿಹಾರಕ್ಕಾಗಿ ಸರ್ವಪಕ್ಷ ನಿಯೋಗದೊಂದಿಗೆ ಪ್ರಧಾನಿ ಭೇಟಿ: ಡಿ.ಕೆ. ಶಿವಕುಮಾರ್

ವಿಧಾನಮಂಡಲವು ಇತ್ತೀಚೆಗೆ ಕಸ್ತೂರಿರಂಗನ್ ವರದಿಯನ್ನು ಪ್ರಸ್ತುತ ರೂಪದಲ್ಲಿ ಸ್ವೀಕರಿಸಲು ಸಾಧ್ಯವಿಲ್ಲ ಎಂಬ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಿದೆ.

ರಾಜ್ಯ ಸರ್ಕಾರವು ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ, ಖಾರಿಫ್ 2026ರ ಬರ ಸಂಬಂಧಿಸಿದಂತೆ ಕೇಂದ್ರದಿಂದ ₹3,705.30 ಕೋಟಿ ನೆರವು ಕೋರಿ ಮನವಿ ಸಲ್ಲಿಸಿತ್ತು. ನಂತರ ಮತ್ತಷ್ಟು ತಾಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಲಾಗಿದ್ದು, ಅಧಿಕೃತ ಸಂಖ್ಯೆ 177ಕ್ಕೆ ಏರಿಕೆಯಾಗಿದೆ. ಬರದ ವ್ಯಾಪ್ತಿ ಇನ್ನಷ್ಟು ಹೆಚ್ಚುವ ಸಾಧ್ಯತೆ ಇರುವುದರಿಂದ ಕೇಂದ್ರದಿಂದ ಹೆಚ್ಚುವರಿ ಪರಿಹಾರ ಪಡೆಯುವ ಕುರಿತು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ.

''ಬರದಿಂದ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಬೆಳೆ ನಷ್ಟ, ಕುಡಿಯುವ ನೀರು, ಜಾನುವಾರುಗಳ ಮೇವು ಹಾಗೂ ಗ್ರಾಮೀಣ ಆರ್ಥಿಕತೆಯ ಮೇಲೂ ಪರಿಣಾಮ ಬೀರಿದೆ. ರಾಜ್ಯದ ಪರಿಸ್ಥಿತಿಯನ್ನು ಕೇಂದ್ರಕ್ಕೆ ಸಮಗ್ರವಾಗಿ ಮನವರಿಕೆ ಮಾಡಿಕೊಡಲಾಗುವುದು'' ಎಂದು ಶಿವಕುಮಾರ್ ತಿಳಿಸಿದ್ದಾರೆ.

ಇದೇ ವೇಳೆ, ರಾಜ್ಯದ ಬರ ಪರಿಸ್ಥಿತಿ ಹಾಗೂ ಮುಂಗಾರು ಬೆಳೆಗಳಿಗೆ ಉಂಟಾಗಿರುವ ಹಾನಿಯನ್ನು ಪರಿಶೀಲಿಸಲು ಕೇಂದ್ರದ ಅಂತರ ಸಚಿವಾಲಯ ತಂಡ ಅಕ್ಟೋಬರ್ 3ರಿಂದ 6ರವರೆಗೆ ಕರ್ನಾಟಕಕ್ಕೆ ಭೇಟಿ ನೀಡಲಿದೆ. ತಂಡವು ವಿವಿಧ ಜಿಲ್ಲೆಗಳಿಗೆ ತೆರಳಿ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ಕೇಂದ್ರಕ್ಕೆ ವರದಿ ಸಲ್ಲಿಸಲಿದೆ. ರಾಯಚೂರು ಸೇರಿದಂತೆ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳೂ ಪರಿಶೀಲನಾ ವ್ಯಾಪ್ತಿಯಲ್ಲಿ ಸೇರಿವೆ.

ಕೇಂದ್ರ ತಂಡದ ಪರಿಶೀಲನೆ ಮತ್ತು ಅಂತಿಮ ವರದಿಯ ಬಳಿಕ ರಾಜ್ಯಕ್ಕೆ ದೊರೆಯಬಹುದಾದ ಹೆಚ್ಚುವರಿ ಬರ ಪರಿಹಾರದ ಪ್ರಮಾಣದ ಕುರಿತು ಸ್ಪಷ್ಟತೆ ಸಿಗುವ ನಿರೀಕ್ಷೆಯಿದೆ. ರಾಜ್ಯ ಸರ್ಕಾರ ಇದೇ ವೇಳೆ ಕೇಂದ್ರದಿಂದ ತಾತ್ಕಾಲಿಕ ನೆರವು ಹಾಗೂ ಎಸ್‌ಡಿಆರ್‌ಎಫ್‌ನ ಕೇಂದ್ರ ಪಾಲಿನ ಮುಂಗಡ ಬಿಡುಗಡೆಗೂ ಮನವಿ ಮಾಡಿದೆ.

# ಅ. 4ರಂದು ಬರ ಅಧ್ಯಯನಕ್ಕಾಗಿ ಜಿಲ್ಲೆಗೆ ಕೇಂದ್ರ ತಂಡ ಭೇಟಿ ನೀಡುವ ಸಾಧ್ಯತೆ: ಪೂವಿತಾ ಎಸ್.

ಅಭಾವದಿಂದ ಜಿಲ್ಲೆಯಲ್ಲಿ ಬರಗಾಲ ಉಂಟಾಗಿದ್ದು, ರೈತರಿಗೆ, ಕೃಷಿ ಕೂಲಿಕಾರರಿಗೆ ತೊಂದರೆಯಾಗದತೆ ನೋಡಿಕೊಳ್ಳಬೇಕು. ರಾಯಚೂರು ಜಿಲ್ಲೆಯಲ್ಲಿ ಅಲ್ಪಸ್ವಲ್ಪ ಮಳೆಗೆ ರೈತರು ಬಿತ್ತಿದ ತೊಗರಿ, ಹತ್ತಿ, ಸಜ್ಜೆ, ಸೂರ್ಯಕಾಂತಿ ಬೆಳೆಗಳು ನಷ್ಟವಾಗಿದ್ದು, ನಷ್ಟವಾದ ರೈತರು ಕಡ್ಡಾಯವಾಗಿ ಬೆಳೆ ಸರ್ವೆ ಮಾಡಿಸಲು ಸಂಬಧಿಸಿದ ಅಧಿಕಾರಿಗಳಿಂದ ಸೂಕ್ತ ಕ್ರಮವಹಿಸಬೇಕು. ಅಲ್ಲದೆ ರೈತರಿಗಾದ ಬೆಳೆನಷ್ಟ ಪರಿಹಾರವನ್ನು ವೈಜ್ಞಾನಿಕವಾಗಿ ತುಲನೆ ಮಾಡಿ ಪರಿಹಾರ ವಿತರಿಸಲು ಸೂಕ್ತಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಬರಗಾಲ ಹಿನ್ನಲೆಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕು. ಭೂಮಿ ದಾಖಲೆ ಹೊಂದಿದ ಎಲ್ಲಾ ರೈತರಿಗೆ ಬರಪರಿಹಾರ ವಿತರಿಸಲು ಸೂಕ್ತ ಮುಂಜಾಗ್ರತೆ ವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ರಾಯೂಚೂರು ತಾಲೂಕಿಗೆ ದಿನವೊಂದಕ್ಕೆ 9 ರಿಂದ 10 ಗಂಟೆಗಳ ಕಾಲ ವಿದ್ಯುತ್ ಒದಗಿಸಬೇಕು. ಹಾಗೂ ಉಳಿದ ತಾಲೂಕುಗಳಿಗೆ 7 ಗಂಟೆಗಳ ಕಾಲ ವಿದ್ಯುತ್ ನೀಡಬೇಕು. ಅಲ್ಲದೆ ಜಿಲ್ಲೆಯ ಎಲ್ಲಾ ರೈತರು ಬೆಳೆ ಸಮೀಕ್ಷೆ ಮಾಡಿಸಲು ಸಂಬಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ರೈತ ಮುಖಂಡರಿದ ಮನವಿ: ಬರಗಾಲದವೆಂದು ಘೋಷಣೆ ಮಾಡಿದ ಪ್ರದೇಶದಲ್ಲಿ ರೈತರ ಬೆಳೆನಷ್ಠ ಪರಿಹಾರ ಕೂಡಲೆ ರೈತರ ಖಾತೆಗೆ ಜಮಾ ಮಾಡಬೇಕು. ಮತ್ತು ಧನಕರುಗಳಿಗೆ ಮೇವು ನೀರಿನ ವೈವಸ್ಥೆ ಮಾಡನಬೇಕು. ತುಂಗಭದ್ರ ಎಡದಂಡೆ ನಾಲೆ ಮತ್ತು ನಾರಾಯಣಪುರ ಬಲದಂಡೆ ನಾಲೆಯ ಉಪಖಾಲುವೆಗಳ ಸಿಲ್ಟ್, ಜಂಗಲ್, ತೆಗೆದು ಕೊನೆ ಭಾಗದ ರೈತರಿಗೆ ಸಮರ್ಪಕ ನೀರು ಕೊಡಬೇಕು. ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಸಬೇಕು. ಜೋಳ ಖರೀದಿ ಕೇಂದ್ರದಲ್ಲಿ ಜೋಳ ಕೊಟ್ಟಂತ ರೈತರಿಗೆ ಕೂಡಲೆ ಹಣ ಬಿಡುಗಡೆ ಮಾಡಬೇಕು. ನಾರಾಯಣಪುರ ಬಲದಂಡೆ ನಾಲೆಯ ವಾರಾಬಂದಿ ಪದ್ಧತಿಯನ್ನು 07 ದಿನ ಬಂದ್ ಮಾಡಿ, 14 ದಿನ ಚಾಲು ಪದ್ಧತಿಯಂತೆ ನೀರು ಹರಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ರೈತರ ಮುಖಂಡರಿದ ಮನವಿ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಲಿಂಗಸುಗೂರು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮಾ,ರ್ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹ್ಮದ್ ಕನವಳ್ಳಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚವ್ಹಾಣ್, ಪಶು ಇಲಾಖೆಯ ಉಪ ನಿರ್ದೇಶಕ ಪೋಮ್ ಸಿಂಗ್, ಕೆ.ಬಿ.ಜೆ.ಎಲ್. ವಿಭಾಗ ಇಇ ಈಶ್ವರ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ರೈತ ಮುಖಂಡರಾದ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ಪ್ರಭಾಕರ ಪಾಟೀಲ್ ಇಂಗಳದಾಳ, ರಾಜ್ಯ ಗೌರವಾಧ್ಯಕ್ಷ ಚಾಮರಸ ಮಾಲಿ ಪಾಟೀಲ್, ದೊಡ್ಡ ಬಸನಗೌಡ ಬಲ್ಲಟಗಿ, ಸೂಗುರಯ್ಯ ಆರ್.ಎಸ್. ಮಠ, ವೆಂಕಪ್ಪ ಕಾರಬಾರಿ, ಬಸವರಾಜ ಮಾಲಿ ಪಾಟೀಲ್, ಮಲ್ಲಣ ದಿನ್ನಿ, ಹಾಜಿ ಮಸ್ತಾನ್ ಸೇರಿದಂತೆ ಇತರರು ಇದ್ದರು.

# ಬರ ಪರಿಹಾರ, ನೀರಾವರಿ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಜೆಡಿಎಸ್ ಪ್ರತಿಭಟನೆ

ವರದಿಯ ನಂತರವೇ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಲಾಗಿದೆ. ಆದರೆ ರೈತರಿಗೆ ₹2,500 ಪರಿಹಾರ ಘೋಷಿಸಿರುವುದು ಸಾಕಾಗುವುದಿಲ್ಲ ಎಂದು ಅವರು ಟೀಕಿಸಿದರು. ಹಿಂದಿನ ಕುಮಾರಸ್ವಾಮಿ ಸರ್ಕಾರದಲ್ಲಿ ರೈತರ ಸಾಲ ಮನ್ನಾ ಮಾಡಲಾಗಿತ್ತು ಎಂದು ಉಲ್ಲೇಖಿಸಿ, ಈಗಿನ ಸರ್ಕಾರವೂ ರೈತರ ಸಂಕಷ್ಟಕ್ಕೆ ಹೆಚ್ಚಿನ ನೆರವು ನೀಡಬೇಕು ಎಂದು ಒತ್ತಾಯಿಸಿದರು.

ಕೆಲ ರೈತರು ಹಾಗೂ ಸಾರ್ವಜನಿಕರು ದೇವದುರ್ಗ ಬಂದ್ ನಡೆಸುವಂತೆ ಸಲಹೆ ನೀಡಿದ್ದರು. ಆದರೆ ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂಬ ಕಾರಣದಿಂದ ಶಾಂತಿಯುತ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುವ ಮಾರ್ಗವನ್ನು ಆಯ್ಕೆ ಮಾಡಿಕೊಂಡಿದ್ದೇವೆ ಎಂದು ಕರಿಯಮ್ಮ ನಾಯಕ ಹೇಳಿದರು.

ಬರಪೀಡಿತ ಗ್ರಾಮಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಜಾನುವಾರುಗಳಿಗೆ ಮೇವು, ಗೋಶಾಲೆಗಳ ಆರಂಭ, ಕಾಲುವೆಗಳ ದುರಸ್ತಿ ಮತ್ತು ಹೂಳು ತೆರವು, ಕೊನೆಯ ಭಾಗದ ರೈತರಿಗೆ ನೀರು ತಲುಪಿಸುವುದು, ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚಿನ ಕೆಲಸ ನೀಡುವುದು ಹಾಗೂ ಬೆಳೆಹಾನಿಯ ಸಮಗ್ರ ಸಮೀಕ್ಷೆ ನಡೆಸಿ ಪರಿಹಾರ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಪ್ರತಿಭಟನಾಕಾರರು ಮುಂದಿಟ್ಟರು.

ಅಲ್ಲದೆ, ಬೋರ್‌ವೆಲ್ ಮತ್ತು ಕುಡಿಯುವ ನೀರಿನ ಘಟಕಗಳ ದುರಸ್ತಿ, ಅಗತ್ಯವಿರುವ ಗ್ರಾಮಗಳಿಗೆ ತುರ್ತು ನೀರು ಪೂರೈಕೆ, ಕೃಷಿ ಉತ್ಪನ್ನಗಳಿಗೆ ಸೂಕ್ತ ಬೆಂಬಲ ಬೆಲೆ ಹಾಗೂ ಬರಪೀಡಿತ ಪ್ರದೇಶಗಳಲ್ಲಿ ರೈತರು ಮತ್ತು ಕೃಷಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವಂತೆ ಸರ್ಕಾರವನ್ನು ಆಗ್ರಹಿಸಿದರು.

ಪ್ರತಿಭಟನೆಯ ಭಾಗವಾಗಿ ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ರೈತ ಸ್ವಾಭಿಮಾನ ಯಾತ್ರೆ ನಡೆಸಿದ ಜೆಡಿಎಸ್ ಮುಖಂಡರು, ದೇವದುರ್ಗಅರಕೇರಾ ತಾಲೂಕುಗಳ ಬರ ಹಾಗೂ ನೀರಾವರಿ ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ತುರ್ತು ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ಹಿರಿಯ ಮುಖಂಡ ಅಂಬರೀಶ್ ಪಾಟೀಲ್, ಮಲ್ಲಣ್ಣ ಸಾಹುಕಾರ ನಾಗರಾಳ, ಶರಣಪ್ಪ ಬಾಳೆ, ರಮೇಶ್ ರಾಮನಾಳ, ಮಾಸರ್ಕಲ್ ಸಿದ್ದಯ್ಯ ಸ್ವಾಮಿ, ಸಿದ್ದಣ್ಣ ದೊಡ್ಡಬಳ್ಳಿ, ಬಾಬು ನಾಯಕ, ಶೇರ್‌ಬಣ್ಣ ಸಾಹುಕಾರ ಗಬ್ಬೂರು, ಇಸಾಕ್ ಮೇಸ್ತ್ರಿ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು, ರೈತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ತಾಯಿ-ಮಕ್ಕಳ ಆರೈಕೆಗೆ ಹೆಚ್ಚಿನ ಆದ್ಯತೆ ನೀಡಿ: ಡಾ. ರಜನಿ ಎಂ.



ರಾಯಚೂರು: ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ತಾಯಿ ಮತ್ತು ಮಕ್ಕಳ ಆರೋಗ್ಯದ ಮೇಲೆ ನಿರಂತರ ನಿಗಾವಹಿಸಿ ಉತ್ತಮ ಚಿಕಿತ್ಸೆ ನೀಡಬೇಕು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕಿ ಡಾ. ರಜನಿ ಎಂ. ಅಧಿಕಾರಿಗಳು ಹಾಗೂ ವೈದ್ಯಕೀಯ ಸಿಬ್ಬಂದಿಗೆ ಸೂಚಿಸಿದರು.

ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡ ಅವರು ಗುಂಜಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ, ರಾಯಚೂರಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಹಾಗೂ ಜಿಲ್ಲಾ ಔಷಧ ಉಗ್ರಾಣಕ್ಕೆ ಭೇಟಿ ನೀಡಿ ಅಲ್ಲಿನ ಆರೋಗ್ಯ ಸೇವೆಗಳು ಮತ್ತು ಸೌಲಭ್ಯಗಳನ್ನು ಪರಿಶೀಲಿಸಿದರು.

ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಹೆರಿಗೆ ಕೊಠಡಿ, ಹೆರಿಗೆ ವಾರ್ಡ್, ಔಷಧ ವಿಭಾಗ, ಪ್ರಯೋಗಾಲಯ ಸೇರಿದಂತೆ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ತಾಯಂದಿರು ಹಾಗೂ ಸಾರ್ವಜನಿಕರೊಂದಿಗೆ ಮಾತನಾಡಿ, ಆಸ್ಪತ್ರೆಯಲ್ಲಿ ದೊರೆಯುತ್ತಿರುವ ಚಿಕಿತ್ಸೆ ಮತ್ತು ಇತರ ಆರೋಗ್ಯ ಸೇವೆಗಳ ಕುರಿತು ಮಾಹಿತಿ ಪಡೆದುಕೊಂಡರು.

ತಾಯಿ ಮತ್ತು ಮಗುವಿನ ಆರೈಕೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಆಸ್ಪತ್ರೆಗೆ ಬರುವ ಪ್ರತಿಯೊಬ್ಬರೊಂದಿಗೂ ವೈದ್ಯರು ಹಾಗೂ ಸಿಬ್ಬಂದಿ ಸೌಜನ್ಯದಿಂದ ವರ್ತಿಸಿ ಅಗತ್ಯ ಚಿಕಿತ್ಸೆ ಮತ್ತು ಮಾರ್ಗದರ್ಶನ ನೀಡಬೇಕು. ಆಸ್ಪತ್ರೆಯ ಒಳ ಹಾಗೂ ಹೊರ ಆವರಣದಲ್ಲಿ ಸ್ವಚ್ಛತೆ ಕಾಪಾಡುವುದರೊಂದಿಗೆ ರೋಗಿಗಳಿಗೆ ಗುಣಮಟ್ಟದ ಸೇವೆ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಬಳಿಕ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದ ಸ್ಕಿಲ್ ಲ್ಯಾಬ್‌ಗೆ ಭೇಟಿ ನೀಡಿದ ಡಾ. ರಜನಿ ಎಂ., ಹೆರಿಗೆ ನಿರ್ವಹಣೆಗೆ ಸಂಬಂಧಿಸಿದ ತಾಂತ್ರಿಕ ಕೌಶಲ್ಯ ಹಾಗೂ ತರಬೇತಿ ಚಟುವಟಿಕೆಗಳ ಕುರಿತು ಅಧಿಕಾರಿಗಳು ಮತ್ತು ಸಿಬ್ಬಂದಿಯೊಂದಿಗೆ ಚರ್ಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್., ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲ ಡಾ. ಸುರೇಂದ್ರಬಾಬು, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ್ ಕೆ., ಡಿಎಫ್‌ಡಬ್ಲ್ಯುಒ ಡಾ. ಶಿವಕುಮಾರ್ ನಾರಾ, ಡಿಟಿಒ ಡಾ. ಯಶೋಧಾ, ಕೆಸೆಪ್ಸ್‌ನ ಹಿರಿಯ ಫಾರ್ಮಸಿ ಅಧಿಕಾರಿ ವಿಜಯಲಕ್ಷ್ಮೀ, ತಾಲೂಕು ಆರೋಗ್ಯಾಧಿಕಾರಿ ಡಾ. ಸತೀಶ್ ಕೆ., ನಿರ್ದೇಶನಾಲಯದ ಕಚೇರಿ ಅಧೀಕ್ಷಕ ಪಿ.ಎಂ. ರಮೇಶ್ ಸೇರಿದಂತೆ ಆಡಳಿತ ವೈದ್ಯಾಧಿಕಾರಿಗಳು, ತಜ್ಞ ವೈದ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# 175 ವರ್ಷಗಳ ಸಂಪ್ರದಾಯದಂತೆ ಬಾಲರಾಮ ಶಾಲೆಯ ಗಣೇಶ ವಿಸರ್ಜನೆ



ರಾಯಚೂರು: ನಗರದ ಸರದಾರ ವಲ್ಲಭಭಾಯಿ ಪಟೇಲ್ ರಸ್ತೆಯಲ್ಲಿರುವ ಬಾಲರಾಮ ಶಾಲೆಯಲ್ಲಿ ಕಳೆದ 175 ವರ್ಷಗಳಿಂದ ಶುದ್ಧ ಮಣ್ಣಿನಿಂದ ಒಂದೇ ಮಾದರಿಯಲ್ಲಿ ಗಣೇಶ ಮೂರ್ತಿಯನ್ನು ತಯಾರಿಸಿ ಪ್ರತಿಷ್ಠಾಪಿಸುವ ಸಂಪ್ರದಾಯ ಈ ವರ್ಷವೂ ಭಕ್ತಿಭಾವದಿಂದ ಮುಂದುವರಿಯಿತು.

ಗಣೇಶ ಚತುರ್ಥಿಯಿಂದ 15 ದಿನಗಳ ಕಾಲ ಪ್ರತಿದಿನ ವಿವಿಧ ಪೂಜೆ, ಪುನಸ್ಕಾರಗಳು ನಡೆದಿದ್ದು, ಸಾವಿರಾರು ಭಕ್ತರು ಆಗಮಿಸಿ ಗಣೇಶನ ದರ್ಶನ ಪಡೆದರು. ವಿಸರ್ಜನೆಗೆ ಮುನ್ನದ ದಿನ ಬಾಲರಾಮ ಶಾಲೆಯ ಸದ್ಭಕ್ತರಿಂದ ಅಹೋರಾತ್ರಿ ಶಿವಭಜನೆ ನಡೆಯಿತು.

ಮರುದಿನ ಹಿರಿಯರ ಮಾರ್ಗದರ್ಶನದಂತೆ ಯಾವುದೇ ಡಿಜೆ ಅಬ್ಬರ ಅಥವಾ ದುಂದುವೆಚ್ಚಕ್ಕೆ ಅವಕಾಶ ನೀಡದೆ, ಗಣೇಶ ಮೂರ್ತಿಯನ್ನು ಪಲ್ಲಕ್ಕಿ ಮಂಟಪದಲ್ಲಿ ಪ್ರತಿಷ್ಠಾಪಿಸಿ ಭಕ್ತರ ಹೆಗಲ ಮೇಲೆ ಹೊತ್ತು ಸಾಂಪ್ರದಾಯಿಕವಾಗಿ ಮೆರವಣಿಗೆ ನಡೆಸಲಾಯಿತು. ಡೊಳ್ಳು, ಬಾಜಾ, ಭಜಂತ್ರಿ ಹಾಗೂ ಭಜನಾ ತಂಡಗಳ ಕನ್ನಡ ಮತ್ತು ತೆಲುಗು ತತ್ವಪದಗಳು, ಭಕ್ತಿಗೀತೆಗಳೊಂದಿಗೆ ಮೆರವಣಿಗೆ ಸಾಗಿತು.

ಬಾಲರಾಮ ಶಾಲೆಯಿಂದ ಆರಂಭವಾದ ಮೆರವಣಿಗೆ ಶಟ್ಟಿಭಾವಿ ವೃತ್ತ, ಪಟೇಲ್ ರಸ್ತೆ, ಸರದಾರ ವಲ್ಲಭಭಾಯಿ ಪಟೇಲ್ ವೃತ್ತ, ಲಕ್ಷ್ಮೀದೇವಿ ಕಲ್ಯಾಣ ಮಂಟಪ, ಕುಂಬಾರ ಓಣಿಯ ಬಸವಂತಪ್ಪ ಆಯಿಲ್ ಮಿಲ್ ಮಾರ್ಗವಾಗಿ ಬಸನಭಾವಿ ವೃತ್ತ ತಲುಪಿತು. ಬಳಿಕ ಅಲ್ಲಿರುವ ಶ್ರೀ ಮಾರುತಿ ದೇವಸ್ಥಾನದ ಬಾವಿಯಲ್ಲಿ ಸಂಪ್ರದಾಯದಂತೆ ಗಣೇಶ ಮೂರ್ತಿಯನ್ನು ವಿಸರ್ಜಿಸಲಾಯಿತು.

ಆಡಂಬರಕ್ಕಿಂತ ಸಂಪ್ರದಾಯ, ಭಕ್ತಿ ಮತ್ತು ಸರಳತೆಗೆ ಆದ್ಯತೆ ನೀಡುವ ಬಾಲರಾಮ ಶಾಲೆಯ ಈ ಗಣೇಶೋತ್ಸವ ಮತ್ತು ವಿಸರ್ಜನಾ ಪದ್ಧತಿ ಹಲವು ವರ್ಷಗಳಿಂದ ವಿಶಿಷ್ಟ ಪರಂಪರೆಯಾಗಿ ಮುಂದುವರಿದಿದೆ.

ಈ ಸಂದರ್ಭದಲ್ಲಿ ಬಾಲರಾಮ ಶಾಲೆ ಹಾಗೂ ಗಣೇಶ ಸಮಿತಿಯ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ನೂರಾರು ಸದ್ಭಕ್ತರು ಉಪಸ್ಥಿತರಿದ್ದರು.

# ಭಾರತ್ ಕೋ ಜಾನೋ ರಸಪ್ರಶ್ನೆಯಲ್ಲಿ ಬಸವಶ್ರೀ ಶಾಲೆಗೆ ದ್ವಿತೀಯ ಸ್ಥಾನ



ರಾಯಚೂರು: ಭಾರತ ವಿಕಾಸ ಪರಿಷತ್ತು ರಾಯಚೂರು ಶಾಖೆ ವತಿಯಿಂದ ನಗರದ ಬಿಆರ್‌ಬಿ ಕಾಲೇಜಿನಲ್ಲಿ ಸೆ.27ರಂದು ಆಯೋಜಿಸಿದ್ದ ಜಿಲ್ಲಾ ಮಟ್ಟದ ಭಾರತ್ ಕೋ ಜಾನೋ2026 ರಸಪ್ರಶ್ನೆ ಸ್ಪರ್ಧೆಯ ಜೂನಿಯರ್ ವಿಭಾಗದಲ್ಲಿ ಬಸವಶ್ರೀ ಶಾಲೆಯ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ.

ದೇಶದ ಇತಿಹಾಸ, ಸಂಸ್ಕೃತಿ, ಪರಂಪರೆ, ಕ್ರೀಡೆ, ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರ ಸೇರಿದಂತೆ ವಿವಿಧ ವಿಷಯಗಳನ್ನು ಆಧರಿಸಿ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಭಾರತದ ವೈವಿಧ್ಯತೆ, ಸಾಧನೆ ಹಾಗೂ ಪರಂಪರೆಯ ಕುರಿತು ವಿದ್ಯಾರ್ಥಿಗಳಲ್ಲಿರುವ ಜ್ಞಾನವನ್ನು ಪರೀಕ್ಷಿಸುವ ಉದ್ದೇಶದಿಂದ ವಿವಿಧ ಸುತ್ತುಗಳಲ್ಲಿ ರಸಪ್ರಶ್ನೆ ನಡೆಯಿತು.

ಶಾಲಾ ಹಂತದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಬಸವಶ್ರೀ ಶಾಲೆಯ 8ನೇ ತರಗತಿ ವಿದ್ಯಾರ್ಥಿನಿಯರಾದ ಸಮಂತಾ ಹಾಗೂ ವೈಷ್ಣವಿ ಜೂನಿಯರ್ ವಿಭಾಗದಲ್ಲಿ ಶಾಲೆಯನ್ನು ಪ್ರತಿನಿಧಿಸಿದರು. ಆರಂಭಿಕ ಲಿಖಿತ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಮುಂದಿನ ಹಂತಕ್ಕೆ ಆಯ್ಕೆಯಾದ ವಿದ್ಯಾರ್ಥಿನಿಯರು, ಬಳಿಕ ನಡೆದ ವಿವಿಧ ಸುತ್ತುಗಳಲ್ಲಿಯೂ ಆತ್ಮವಿಶ್ವಾಸದಿಂದ ಉತ್ತರಿಸಿ ದ್ವಿತೀಯ ಸ್ಥಾನ ಪಡೆದುಕೊಂಡರು.

ವಿದ್ಯಾರ್ಥಿನಿಯರ ಸಾಧನೆಗೆ ಸಂತಸ ವ್ಯಕ್ತಪಡಿಸಿದ ಶಾಲೆಯ ಮುಖ್ಯೋಪಾಧ್ಯಾಯರು, ಇಂತಹ ರಸಪ್ರಶ್ನೆ ಸ್ಪರ್ಧೆಗಳು ಪಠ್ಯಪುಸ್ತಕದ ಜ್ಞಾನದ ಜೊತೆಗೆ ದೇಶದ ಇತಿಹಾಸ, ಸಂಸ್ಕೃತಿ ಮತ್ತು ಸಮಕಾಲೀನ ವಿಷಯಗಳ ಕುರಿತು ವಿದ್ಯಾರ್ಥಿಗಳ ಅರಿವನ್ನು ವಿಸ್ತರಿಸುತ್ತವೆ. ಅಲ್ಲದೆ ಅವರಲ್ಲಿ ಧೈರ್ಯ, ಆತ್ಮವಿಶ್ವಾಸ ಹಾಗೂ ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಸಾಧನೆ ಮಾಡಿದ ಸಮಂತಾ ಮತ್ತು ವೈಷ್ಣವಿ ಅವರನ್ನು ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು ಅಭಿನಂದಿಸಿ ಶುಭ ಹಾರೈಸಿದರು. ವಿದ್ಯಾರ್ಥಿಗಳಿಗೆ ಸ್ಪರ್ಧೆಗೆ ಅಗತ್ಯ ಮಾರ್ಗದರ್ಶನ ನೀಡಿದ ಶಿಕ್ಷಕರನ್ನೂ ಈ ಸಂದರ್ಭದಲ್ಲಿ ಅಭಿನಂದಿಸಲಾಯಿತು.

# ಮೂರು ಓಟಗಳಲ್ಲಿ ಪ್ರಥಮ ಸ್ಥಾನ: ರಾಜ್ಯಮಟ್ಟಕ್ಕೆ ವೆಂಕಟೇಶ್ ಆಯ್ಕೆ



ಹಟ್ಟಿ ಚಿನ್ನದ ಗಣಿ: ಸ್ಥಳೀಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಥಮ ಪಿಯುಸಿ ವಿದ್ಯಾರ್ಥಿ ವೆಂಕಟೇಶ್ ತಂದೆ ಲಿಂಗರಾಜ ಅವರು ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಮೂರು ವೈಯಕ್ತಿಕ ಓಟದ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಸೆ.25ರಂದು ನಡೆದ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ವೆಂಕಟೇಶ್, 1500 ಮೀಟರ್, 3000 ಮೀಟರ್ ಹಾಗೂ 5000 ಮೀಟರ್ ಓಟದ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಮೂರರಲ್ಲಿಯೂ ಪ್ರಥಮ ಸ್ಥಾನ ಗಳಿಸಿದ್ದಾರೆ. ಈ ಮೂಲಕ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸುವ ಅರ್ಹತೆ ಪಡೆದುಕೊಂಡಿದ್ದಾರೆ.

ಮೂರು ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಗಳಿಸಿದ ಸಾಧನೆಗಾಗಿ ವೆಂಕಟೇಶ್ ಅವರಿಗೆ ವೀರಾಗ್ರಣಿ ಪ್ರಶಸ್ತಿಯನ್ನೂ ನೀಡಿ ಗೌರವಿಸಲಾಗಿದೆ.

ವಿದ್ಯಾರ್ಥಿಯ ಸಾಧನೆಗೆ ಕಾಲೇಜಿನ ಪ್ರಾಚಾರ್ಯ ಶಾಮರಾವ್ ಜಿ., ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ರಮೇಶ್ ಉಳಿಮೇಶ್ವರ, ಉಪನ್ಯಾಸಕರು ಹಾಗೂ ಹಟ್ಟಿಯ ಸಾರ್ವಜನಿಕರು ಅಭಿನಂದನೆ ಸಲ್ಲಿಸಿ, ರಾಜ್ಯಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡಿ ಕಾಲೇಜು ಹಾಗೂ ಹಟ್ಟಿ ಪ್ರದೇಶಕ್ಕೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

# ರಾಷ್ಟ್ರಮಟ್ಟದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ರಾಯಚೂರು ವಿದ್ಯಾರ್ಥಿಗಳ ಪದಕ ಬೇಟೆ



ರಾಯಚೂರು, ಸೆ.27: ತೆಲಂಗಾಣದ ಮಕ್ತಲ್‌ನ ರಾಯಲ್ ಪ್ಯಾಲೇಸ್‌ನಲ್ಲಿ ನಡೆದ ರಾಷ್ಟ್ರಮಟ್ಟದ ಕರಾಟೆ ಡು ಮತ್ತು ಕುಂಗ್ ಫು ಚಾಂಪಿಯನ್‌ಶಿಪ್2026ರಲ್ಲಿ ರಾಯಚೂರಿನ ಶ್ರೀ ಸೂಗುರೇಶ್ವರ ಕರಾಟೆ ಸಂಸ್ಥೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಗಮನ ಸೆಳೆದಿದ್ದಾರೆ.

ಚಾಂಪಿಯನ್‌ಶಿಪ್‌ನಲ್ಲಿ ಸಂಸ್ಥೆಯ ಒಟ್ಟು 22 ವಿದ್ಯಾರ್ಥಿಗಳು ಭಾಗವಹಿಸಿದ್ದು, ಸ್ಪರ್ಧೆಯಲ್ಲಿ ಪಾಲ್ಗೊಂಡ ಎಲ್ಲ 22 ವಿದ್ಯಾರ್ಥಿಗಳು ಪದಕ ಗೆಲ್ಲುವ ಮೂಲಕ ವಿಶೇಷ ಸಾಧನೆ ಮಾಡಿದ್ದಾರೆ. ಈ ಪೈಕಿ 6 ವಿದ್ಯಾರ್ಥಿಗಳು ಪ್ರಥಮ ಸ್ಥಾನ ಪಡೆದುಕೊಂಡರೆ, 10 ವಿದ್ಯಾರ್ಥಿಗಳು ದ್ವಿತೀಯ ಹಾಗೂ 6 ವಿದ್ಯಾರ್ಥಿಗಳು ತೃತೀಯ ಸ್ಥಾನ ಪಡೆದು ಸಂಸ್ಥೆಗೆ ಕೀರ್ತಿ ತಂದಿದ್ದಾರೆ.

ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ತೋರಿದ ಪ್ರದರ್ಶನಕ್ಕೆ ಸಂಸ್ಥೆಯ ಮುಖ್ಯ ತರಬೇತುದಾರ ಎನ್. ಸೂಗಪ್ಪ ಹರ್ಷ ವ್ಯಕ್ತಪಡಿಸಿದರು. ನಿರಂತರ ಅಭ್ಯಾಸ, ಶಿಸ್ತು ಹಾಗೂ ಪರಿಶ್ರಮದಿಂದ ವಿದ್ಯಾರ್ಥಿಗಳು ಈ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಹ ತರಬೇತುದಾರರಾದ ಪ್ರಕಾಶ, ಮಲ್ಲೇಶ ಮತ್ತು ಸುರೇಶ ಅವರು ಪದಕ ವಿಜೇತ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಮಟ್ಟದ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡುವಂತೆ ಶುಭ ಹಾರೈಸಿದರು.

# ಗಾಣಧಾಳವನ್ನು ಹೋಬಳಿ ಕೇಂದ್ರವನ್ನಾಗಿ ಘೋಷಿಸಿ: ಗ್ರಾಮಸ್ಥರ ಆಗ್ರಹ



ಅರಕೇರಾ, ಸೆ.28: ಗಾಣಧಾಳ ಗ್ರಾಮ ಪಂಚಾಯಿತಿಯನ್ನು ಅರಕೇರಾ ತಾಲ್ಲೂಕಿನಲ್ಲಿಯೇ ಮುಂದುವರಿಸುವುದರ ಜೊತೆಗೆ ಗಾಣಧಾಳ ಗ್ರಾಮವನ್ನು ಹೋಬಳಿ ಕೇಂದ್ರವನ್ನಾಗಿ ಘೋಷಿಸಿ, ನಾಡ ಕಚೇರಿ ಸ್ಥಾಪಿಸಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ, ಗಾಣಧಾಳ ಗ್ರಾಮವು ಸುತ್ತಮುತ್ತಲಿನ ಹಲವು ಗ್ರಾಮಗಳಿಗೆ ಸಮೀಪದಲ್ಲಿದ್ದು, ಗ್ರಾಮ ಪಂಚಾಯಿತಿ ಕಾರ್ಯಾಲಯವೂ ಕಾರ್ಯನಿರ್ವಹಿಸುತ್ತಿದೆ. ಇದರಿಂದ ಸುತ್ತಮುತ್ತಲಿನ ಗ್ರಾಮಗಳ ಸಾರ್ವಜನಿಕರು ಹಾಗೂ ರೈತರಿಗೆ ವಿವಿಧ ಸರ್ಕಾರಿ ಸೇವೆಗಳನ್ನು ಪಡೆಯಲು ಅನುಕೂಲವಾಗುತ್ತಿದೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಜಾತಿ ಮತ್ತು ಆದಾಯ ಪ್ರಮಾಣಪತ್ರ, ವಾಸಸ್ಥಳ ಪ್ರಮಾಣಪತ್ರ ಸೇರಿದಂತೆ ವಿವಿಧ ಸರ್ಕಾರಿ ದಾಖಲೆಗಳು ಅಗತ್ಯವಿದ್ದು, ಅವುಗಳನ್ನು ಪಡೆಯಲು ಗಾಣಧಾಳದಿಂದ ಅರಕೇರಾ ತಾಲ್ಲೂಕು ಕೇಂದ್ರಕ್ಕೆ ತೆರಳಬೇಕಾಗಿದೆ. ಗಾಣಧಾಳದಿಂದ ಅರಕೇರಾಗೆ ಸುಮಾರು 21 ಕಿ.ಮೀ. ಅಂತರವಿರುವುದರಿಂದ ಸಾರ್ವಜನಿಕರಿಗೆ ಸಮಯ ಹಾಗೂ ಹಣ ಎರಡೂ ವ್ಯಯವಾಗುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಗಾಣಧಾಳ ಗ್ರಾಮದಲ್ಲಿ ಈಗಾಗಲೇ ಆರೋಗ್ಯ ಕೇಂದ್ರ, ಅಂಚೆ ಕಚೇರಿ, ಬ್ಯಾಂಕ್, ಪಶು ಆಸ್ಪತ್ರೆ, ಶಾಲೆ ಮತ್ತು ಪ್ರೌಢಶಾಲೆ ಸೇರಿದಂತೆ ಹಲವು ಮೂಲಸೌಕರ್ಯಗಳಿವೆ. ಹೀಗಾಗಿ ಗಾಣಧಾಳವನ್ನು ಹೋಬಳಿ ಕೇಂದ್ರವನ್ನಾಗಿ ರೂಪಿಸಲು ಅಗತ್ಯ ಸೌಲಭ್ಯಗಳು ಲಭ್ಯವಿವೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಸಾರ್ವಜನಿಕರು, ರೈತರು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಗಾಣಧಾಳ ಗ್ರಾಮ ಪಂಚಾಯಿತಿಯನ್ನು ಅರಕೇರಾ ತಾಲ್ಲೂಕಿನಲ್ಲಿಯೇ ಉಳಿಸಿ, ಗಾಣಧಾಳವನ್ನು ಹೋಬಳಿ ಕೇಂದ್ರವನ್ನಾಗಿ ಘೋಷಿಸಿ ನಾಡ ಕಚೇರಿ ಸ್ಥಾಪಿಸಲು ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾನಯ್ಯ ಮಾಲಿ ಪಾಟೀಲ್ ಗಾಣದಾಳ, ಕೊಳಪ್ಪ ದೇಸಾಯಿ ಕಕ್ಕಲದೊಡ್ಡಿ, ಗಾಣದಾಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಲ್ಲಿಕಾರ್ಜುನ ಯಲಗಟ್ಟಿ, ಉಪಾಧ್ಯಕ್ಷ ನರಸಣ್ಣ ನಾಯಕ, ಬಸವರಾಜ ನಾಯಕ ಕಾವಲಿ ಗಾಣದಾಳ, ಶಿವರಾಜ ನಾಯಕ ಜಿಲ್ಲೆ ಕಮಲದಿನ್ನಿ, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಸೋಫಿ ಸಾಹೇಬು ಗಾಣದಾಳ, ಬಸವರಾಜ ದೊಡ್ಮನೆ ಗಾಣದಾಳ, ಶಿವರಾಜ ನಾಯಕ ಮಂಡಲಗುಡ್ಡ ಹಾಗೂ ದೇವದುರ್ಗ ತಾಲೂಕು ವಾಲ್ಮೀಕಿ ಸ್ವಾಭಿಮಾನಿ ಚಳವಳಿ ಸಂಘದ ಅಧ್ಯಕ್ಷ ಶಿವಪ್ಪ ನಾಯಕ ಕಕ್ಕಲದೊಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನ ರಜತ ಮಹೋತ್ಸವ ವಿಜೃಂಭಣೆಗೆ ಸಿದ್ಧತೆ



ಲಿಂಗಸುಗೂರು: ಪಟ್ಟಣದ ಎಸ್.ಬಿ.ಎಚ್. ಕಾಲೋನಿಯಲ್ಲಿರುವ ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನ ಪ್ರತಿಷ್ಠಾಪನೆಯಾಗಿ 25 ವರ್ಷಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ರಜತ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ದೇವಸ್ಥಾನ ಸಮಿತಿ ನಿರ್ಧರಿಸಿದೆ.

ದೇವಸ್ಥಾನ ಸಮಿತಿ ಅಧ್ಯಕ್ಷ ಮೋಹನ ಜೋಶಿ ಮಾತನಾಡಿ, ನವರಾತ್ರಿ ಅಂಗವಾಗಿ ಒಂಬತ್ತು ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳು, ಪಂಡಿತರಿಂದ ಪ್ರವಚನಗಳು ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ರಜತ ಮಹೋತ್ಸವದ ಅಂಗವಾಗಿ ಉಡುಪಿಯ ಅದಮಾರು ಮಠದ ಶ್ರೀ ಶ್ರೀ ವಿಶ್ವಪ್ರಿಯತೀರ್ಥರು, ಬೆಂಗಳೂರಿನ ಭಂಡಾರಕೇರಿ ಮಠದ ಶ್ರೀ ಶ್ರೀ ವಿದ್ಯೇಶತೀರ್ಥರು ಹಾಗೂ ಹುಣಸಿಹೊಳೆ ಕಣ್ವಮಠದ ಶ್ರೀ ಶ್ರೀ ವಿದ್ಯಾಕಣ್ವವಿರಾಜತೀರ್ಥರು ಆಗಮಿಸಲಿದ್ದಾರೆ. ಶ್ರೀಗಳು ಸಂಸ್ಥಾನ ಪೂಜೆ ನೆರವೇರಿಸಿ ಭಕ್ತರಿಗೆ ಆಶೀರ್ವಚನ ನೀಡಲಿದ್ದಾರೆ ಎಂದು ಹೇಳಿದರು.

ರಜತ ಮಹೋತ್ಸವದ ವಿವಿಧ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ದೇವಸ್ಥಾನ ಸಮಿತಿ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಹಿರಿಯ ಧರ್ಮದರ್ಶಿ ಪ್ರಾಣೇಶಾಚಾರ್ಯ ಪುರಾಣಿಕ ವಂದಲಿ, ಜಗನ್ನಾಥ ಕುಲಕರ್ಣಿ, ಪ್ರಮೋದ ಕುಲಕರ್ಣಿ, ರಾಜಗೋಪಾಲ, ರಾಘವೇಂದ್ರ ಆಚಾರ, ಬಿ.ಟಿ. ನಾಯಕ, ಯಲಗೂರೇಶ, ವಸಂತರಾವ್, ವೆಂಕಟರಾವ್ ತೊರಲಬೆಂಚಿ, ಮಹೇಶ, ರಾಘವೇಂದ್ರ ಗುಮಾಸ್ತೆ, ಕೃಷ್ಣಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹೂಗಾರ ಸಮಾಜಕ್ಕೆ ಪ್ರತ್ಯೇಕ ನಿಗಮ ಸ್ಥಾಪಿಸಿ: ಮಲ್ಲಪ್ಪ ಹೂಗಾರ ಒತ್ತಾಯ



ಲಿಂಗಸುಗೂರು: ಹೂಗಾರ ಸಮಾಜವು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ಸಮುದಾಯವಾಗಿದ್ದು, ಹೂ ವ್ಯಾಪಾರ, ಪೂಜಾರಿಕೆ ಸೇರಿದಂತೆ ಸಾಂಪ್ರದಾಯಿಕ ಕಾಯಕಗಳನ್ನು ಅವಲಂಬಿಸಿರುವ ಅನೇಕ ಕುಟುಂಬಗಳು ಇಂದಿಗೂ ಆರ್ಥಿಕ ಸಂಕಷ್ಟ ಎದುರಿಸುತ್ತಿವೆ. ಹೀಗಾಗಿ ಸರ್ಕಾರ ಹೂಗಾರ ಸಮಾಜದ ಅಭಿವೃದ್ಧಿಗಾಗಿ ವಿಶೇಷ ಯೋಜನೆಗಳನ್ನು ಜಾರಿಗೆ ತರಬೇಕು ಎಂದು ಹೂಗಾರ ಸಮಾಜದ ತಾಲೂಕು ಅಧ್ಯಕ್ಷ ಮಲ್ಲಪ್ಪ ಹೂಗಾರ ಒತ್ತಾಯಿಸಿದರು.

ಪಟ್ಟಣದ ಹೂಗಾರ ಭವನದಲ್ಲಿ ಶ್ರೀ ಹೂಗಾರ ಮಾದಯ್ಯನವರ ಜಯಂತಿ ಅಂಗವಾಗಿ ಭಾವಚಿತ್ರಕ್ಕೆ ಹಾಗೂ ಶ್ರೀ ಹೂಗಾರ ಮಾದಯ್ಯನವರ ವೃತ್ತಕ್ಕೆ ಪುಷ್ಪನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಸಮಾಜದ ಯುವಕರು ಹಾಗೂ ಕಾಯಕನಿಷ್ಠೆಯಿಂದ ಬದುಕುತ್ತಿರುವ ಕುಟುಂಬಗಳಿಗೆ ಆರ್ಥಿಕ ನೆರವು, ಸಾಲ ಸೌಲಭ್ಯ, ಸಬ್ಸಿಡಿ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಸಮಾಜವನ್ನು ಮುಖ್ಯವಾಹಿನಿಗೆ ತರಬೇಕು ಎಂದು ಹೇಳಿದರು. ರಾಜ್ಯದಲ್ಲಿ ಹೂಗಾರ ಸಮಾಜದ ಜನಸಂಖ್ಯೆ ಸುಮಾರು 5ರಿಂದ 6 ಲಕ್ಷದಷ್ಟಿದ್ದು, ಸಮಾಜದ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

ಪೂಜಾರಿಕೆ ವೃತ್ತಿಯನ್ನು ಮುಂದುವರಿಸಿಕೊಂಡು ಬರುತ್ತಿರುವ ಅರ್ಹ ಕುಟುಂಬಗಳಿಗೆ ಇನಾಮು ಭೂಮಿಯನ್ನು ಮರಳಿ ನೀಡುವ ಸಂಬಂಧ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಸಮಾಜದ ಗೌರವಾಧ್ಯಕ್ಷ ಮಂಜುನಾಥ ಹೂಗಾರ ಮಾತನಾಡಿ, ಸಾವಿತ್ರಿಬಾಯಿ ಫುಲೆ ಹಾಗೂ ಜ್ಯೋತಿಬಾ ಫುಲೆ ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ದೇಶಕ್ಕೆ ಮಾದರಿಯಾಗಿದೆ. ಅಲ್ಲಮಪ್ರಭು ಹಾಗೂ ಹೂಗಾರ ಮಾದಯ್ಯ ಅವರು ಕಾಯಕ, ಸಮಾನತೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಸಾರಿದ ಮಹನೀಯರು. ಇಂತಹ ಮಹಾನ್ ವ್ಯಕ್ತಿಗಳ ಪರಂಪರೆಯಲ್ಲಿ ನಾವು ಜನಿಸಿರುವುದು ಹೆಮ್ಮೆಯ ಸಂಗತಿ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ಮಾದರಿಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಮಾಜದ ಉಪಾಧ್ಯಕ್ಷ ಶಿವಮಹಾಂತೇಶ್ ಹೂಗಾರ, ವೆಂಕಟೇಶ್ ಹೂಗಾರ, ಬಸವರಾಜ ಹೂಗಾರ, ನಾಗರಾಜ ಹೂಗಾರ, ಮಲ್ಲಿಕಾರ್ಜುನ ಹೂಗಾರ, ಶರಣಬಸವ, ಹನುಮೇಶ್, ಮಹಾತೇಶ್, ವಿರೂಪಾಕ್ಷಿ, ಶಂಕರಪ್ಪ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಭಗತ್ ಸಿಂಗ್ ಆದರ್ಶಗಳು ಯುವಜನತೆಗೆ ಪ್ರೇರಣೆಯಾಗಲಿ




ರಾಯಚೂರು, ಸೆ.28: ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ ಶಹೀದ್ ಭಗತ್ ಸಿಂಗ್ ಅವರ 119ನೇ ಜನ್ಮದಿನವನ್ನು ನಗರದ ಸ್ಟೇಷನ್ ರಸ್ತೆಯ ಸಾರ್ವಜನಿಕ ಉದ್ಯಾನವನದಲ್ಲಿ ರಾಯಚೂರು ವಾಕಿಂಗ್ ಕ್ಲಬ್ ಹಾಗೂ ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ (ಎಐಡಿವೈಓ) ವತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಎಐಡಿವೈಓ ಜಿಲ್ಲಾ ಅಧ್ಯಕ್ಷ ಚನ್ನಬಸವ ಜಾನೇಕಲ್ ಮಾತನಾಡಿ, ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ವಿವಿಧ ಹೋರಾಟದ ಧಾರೆಗಳು ಕಾರ್ಯನಿರ್ವಹಿಸಿದ್ದವು. ಭಗತ್ ಸಿಂಗ್, ಚಂದ್ರಶೇಖರ್ ಆಜಾದ್ ಹಾಗೂ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರಂತಹ ಕ್ರಾಂತಿಕಾರಿಗಳು ಅಗತ್ಯವಿದ್ದರೆ ಸಶಸ್ತ್ರ ಹೋರಾಟದ ಮೂಲಕ ಸ್ವಾತಂತ್ರ್ಯ ಪಡೆಯಬೇಕು ಎಂಬ ನಿಲುವು ಹೊಂದಿದ್ದರು ಎಂದು ಹೇಳಿದರು.

ಭಗತ್ ಸಿಂಗ್ ಹಾಗೂ ಅವರ ಸಂಗಡಿಗರ ಹೋರಾಟ ಕೇವಲ ಬ್ರಿಟಿಷರ ಆಡಳಿತದಿಂದ ದೇಶವನ್ನು ಮುಕ್ತಗೊಳಿಸುವುದಕ್ಕೆ ಸೀಮಿತವಾಗಿರಲಿಲ್ಲ. ಜಾತಿ ಪದ್ಧತಿ, ಅಸಮಾನತೆ ಮತ್ತು ಶೋಷಣೆಯಂತಹ ಸಾಮಾಜಿಕ ಪಿಡುಗುಗಳನ್ನು ತೊಡೆದುಹಾಕಿ ಸಮಾನತೆಯ ಸಮಾಜ ನಿರ್ಮಿಸಬೇಕು ಎಂಬ ಆಶಯ ಅವರದ್ದಾಗಿತ್ತು. ಹಿಂದೂಸ್ತಾನ್ ಸೋಶಿಯಲಿಸ್ಟ್ ರಿಪಬ್ಲಿಕನ್ ಅಸೋಸಿಯೇಷನ್‌ನಲ್ಲಿ ಸಕ್ರಿಯರಾಗಿದ್ದ ಅವರು, ಮಾನವನಿಂದ ಮಾನವನ ಶೋಷಣೆ ಇಲ್ಲದ ಸಮಾಜದ ನಿರ್ಮಾಣದ ಕನಸು ಕಂಡಿದ್ದರು ಎಂದರು.

ಭಗತ್ ಸಿಂಗ್ ಅಪಾರ ಓದಿನ ಆಸಕ್ತಿ ಹೊಂದಿದ್ದ ಯುವ ಕ್ರಾಂತಿಕಾರಿಯಾಗಿದ್ದರು. ಚಿಕ್ಕ ವಯಸ್ಸಿನಲ್ಲಿಯೇ ವಿವಿಧ ವಿಷಯಗಳ ಕುರಿತು ಅಧ್ಯಯನ ನಡೆಸಿ ಗಳಿಸಿದ ಜ್ಞಾನವನ್ನು ದೇಶದ ವಿಮೋಚನಾ ಹೋರಾಟಕ್ಕೆ ಬಳಸಿಕೊಂಡಿದ್ದರು. ಅವರ ಆದರ್ಶ, ಮೌಲ್ಯ ಮತ್ತು ಹೋರಾಟದ ಮನೋಭಾವ ಇಂದಿನ ಯುವಜನತೆಗೆ ಪ್ರೇರಣೆಯಾಗಬೇಕು ಎಂದು ಚನ್ನಬಸವ ಜಾನೇಕಲ್ ತಿಳಿಸಿದರು.

ರಾಯಚೂರು ವಾಕಿಂಗ್ ಕ್ಲಬ್‌ನ ಸಿದ್ದೇಶ್ ಗು. ವಿರಕ್ತಮಠ ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ಭಗತ್ ಸಿಂಗ್ ತಮ್ಮ ಜೀವನವನ್ನೇ ಬಲಿದಾನ ಮಾಡಿದರು. ಬ್ರಿಟಿಷರ ವಿರುದ್ಧ ರಾಜಿ ಮಾಡಿಕೊಳ್ಳದೆ ಹೋರಾಟ ನಡೆಸಿದ ಅವರು, ರಾಜಗುರು ಮತ್ತು ಸುಖದೇವ್ ಅವರೊಂದಿಗೆ ಹುತಾತ್ಮರಾದರು. ಸ್ವಾತಂತ್ರ್ಯ ಹೋರಾಟದಲ್ಲಿ ಅವರ ತ್ಯಾಗ ಮತ್ತು ಬಲಿದಾನ ಸದಾ ಸ್ಮರಣೀಯ ಎಂದರು.

ಕಾರ್ಯಕ್ರಮದಲ್ಲಿ ರಾಯಚೂರು ವಾಕಿಂಗ್ ಕ್ಲಬ್‌ನ ವಿ. ಲಕ್ಷ್ಮಿ ರೆಡ್ಡಿ, ಸಿದ್ದೇಶ್ ವಿರಕ್ತಮಠ, ಮುತ್ತುರಾಜ್, ಶರಣಬಸವ, ನರಸಿಂಹಲು, ಜಲಾಲುದ್ದೀನ್, ಬಸವರಾಜ ರೆಡ್ಡಿ, ಜಾಕಿರ್ ಹುಸೇನ್, ರಾಜೇಶ್, ಚಂದ್ರು, ಮುನಿಸ್ವಾಮಿ, ಸುರೇಶ್ ರಹೀಮ್, ಬಸವರಾಜ್, ವೀರೇಶ ರೆಡ್ಡಿ, ಲಕ್ಷ್ಮಣ್, ಮುನಿರೆಡ್ಡಿ, ಅಜರ ಹುಸೇನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ತೆರಿಗೆ ವಸೂಲಾತಿಯಲ್ಲಿ ನಿರ್ಲಕ್ಷ್ಯ: ಇಬ್ಬರು ಪಿಡಿಒ ಅಮಾನತು




ರಾಯಚೂರು: ತೆರಿಗೆ ವಸೂಲಾತಿಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸದೆ ಕರ್ತವ್ಯ ಲೋಪ ಎಸಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ ದೇವದುರ್ಗ ತಾಲೂಕಿನ ಶಾವಂತಗೇರಾ ಹಾಗೂ ಮಾನ್ವಿ ತಾಲೂಕಿನ ಸಾದಾಪುರ ಗ್ರಾಮ ಪಂಚಾಯಿತಿಗಳ ಇಬ್ಬರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು (ಪಿಡಿಒ) ಸೇವೆಯಿಂದ ಅಮಾನತುಗೊಳಿಸಲಾಗಿದೆ. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಕರವಸೂಲಿಗಾರರ ಸಿಬ್ಬಂದಿ ಅನುಮೋದನೆಯನ್ನು ರದ್ದುಗೊಳಿಸಿ, ಸೇವೆಯಿಂದ ವಜಾಗೊಳಿಸುವ ಕುರಿತು ಇಲಾಖಾ ವಿಚಾರಣೆ ಹಾಗೂ ಶಿಸ್ತು ಕ್ರಮಕ್ಕೆ ಆದೇಶಿಸಲಾಗಿದೆ.

ರಾಯಚೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅವರು ಈ ಕುರಿತು ಆದೇಶ ಹೊರಡಿಸಿದ್ದು, ತೆರಿಗೆ ವಸೂಲಾತಿಯಲ್ಲಿ ನಿರಂತರ ನಿರ್ಲಕ್ಷ್ಯ ತೋರಿದ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

ದೇವದುರ್ಗ ತಾಲೂಕಿನ ಶಾವಂತಗೇರಾ ಗ್ರಾಮ ಪಂಚಾಯಿತಿಯ ಪ್ರಭಾರಿ ಪಿಡಿಒ ಮತೀನುದ್ದೀನ್ ಹಾಗೂ ಕರವಸೂಲಿಗಾರ ರಾಜಶೇಖರ, ಮಾನ್ವಿ ತಾಲೂಕಿನ ಸಾದಾಪುರ ಗ್ರಾಮ ಪಂಚಾಯಿತಿಯ ಪಿಡಿಒ ಪ್ರಭುಕುಮಾರ್ ಹಾಗೂ ಕರವಸೂಲಿಗಾರರಾದ ಹೇಮಣ್ಣ ಮತ್ತು ಹನುಮಂತರಾಯ ವಿರುದ್ಧ ಕ್ರಮ ಜರುಗಿಸಲಾಗಿದೆ.

ಸಾದಾಪುರ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು ₹31,89,780.68 ತೆರಿಗೆ ಬೇಡಿಕೆ ಇದ್ದು, ಈ ಪೈಕಿ ಕೇವಲ ₹55,246.67 ವಸೂಲಿಯಾಗಿದೆ. ಶಾವಂತಗೇರಾ ಗ್ರಾಮ ಪಂಚಾಯಿತಿಯಲ್ಲಿ ₹28,78,086.78 ತೆರಿಗೆ ಬೇಡಿಕೆಯಿದ್ದು, ₹1,56,328 ಮಾತ್ರ ವಸೂಲಿಯಾಗಿದೆ.

ಜಿಲ್ಲೆಯಲ್ಲಿಯೇ ಈ ಎರಡೂ ಗ್ರಾಮ ಪಂಚಾಯಿತಿಗಳ ತೆರಿಗೆ ವಸೂಲಾತಿ ಪ್ರಗತಿ ಅತ್ಯಂತ ಕಡಿಮೆ ಮಟ್ಟದಲ್ಲಿರುವುದು ಕಂಡುಬಂದಿದೆ. ತೆರಿಗೆ ವಸೂಲಾತಿ ಹೆಚ್ಚಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಹಲವು ಬಾರಿ ಸೂಚನೆ ನೀಡಿದ್ದರೂ ನಿರೀಕ್ಷಿತ ಪ್ರಗತಿ ಸಾಧಿಸಿಲ್ಲ. ಮೇಲಾಧಿಕಾರಿಗಳ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಲ್ಲಿಯೂ ನಿರ್ಲಕ್ಷ್ಯ ತೋರಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು2021ರ ನಿಯಮ 3ರ ಅನ್ವಯ ಸಂಬಂಧಿಸಿದ ಇಬ್ಬರು ಪಿಡಿಒಗಳನ್ನು ಅಮಾನತುಗೊಳಿಸಲಾಗಿದೆ.

ಅದೇ ರೀತಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿಯ ಸ್ವರೂಪ, ವೇತನ, ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು2020ರ ನಿಯಮ 8ರ ಅನ್ವಯ ಮೂವರು ಕರವಸೂಲಿಗಾರರ ಸಿಬ್ಬಂದಿ ಅನುಮೋದನೆಯನ್ನು ರದ್ದುಗೊಳಿಸಿ, ಸೇವೆಯಿಂದ ವಜಾಗೊಳಿಸುವ ಕುರಿತು ಇಲಾಖಾ ವಿಚಾರಣೆ ನಡೆಸುವಂತೆ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳಿಗೆ ಸೂಚಿಸಲಾಗಿದೆ.

## ಪ್ರಜಾಸೌಧ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ: ಎನ್.ಎಸ್. ಬೋಸರಾಜು



ಮಾನ್ವಿ: ಪಟ್ಟಣದ ರಾಯಚೂರು ಸಿಂಧನೂರು ರಸ್ತೆಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ತಾಲೂಕು ಆಡಳಿತ ಭವನ ಪ್ರಜಾಸೌಧ ಕಾಮಗಾರಿಯನ್ನು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಪರಿಶೀಲಿಸಿ, ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸುವಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ತಾಲೂಕಿನ ಜನರಿಗೆ ವಿವಿಧ ಇಲಾಖೆಗಳ ಸೇವೆಗಳು ಒಂದೇ ಸ್ಥಳದಲ್ಲಿ ದೊರೆಯುವಂತೆ ಮಾಡುವ ಉದ್ದೇಶದಿಂದ ಸರ್ಕಾರ ತಾಲೂಕು ಆಡಳಿತ ಭವನ ಪ್ರಜಾಸೌಧವನ್ನು ನಿರ್ಮಿಸುತ್ತಿದೆ. ಆದರೆ ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಹೇಳಿದರು.

ಪ್ರಜಾಸೌಧ ಕಾಮಗಾರಿ ಈಗ ಅಂತಿಮ ಹಂತದಲ್ಲಿದ್ದು, ಉಳಿದಿರುವ ಕೆಲಸಗಳನ್ನು ವಿಳಂಬ ಮಾಡದೆ ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಕಟ್ಟಡವನ್ನು ಶೀಘ್ರ ಸಾರ್ವಜನಿಕ ಸೇವೆಗೆ ಮುಕ್ತಗೊಳಿಸುವ ಮೂಲಕ ತಾಲೂಕಿನ ಜನರಿಗೆ ಅನುಕೂಲ ಕಲ್ಪಿಸಬೇಕು ಎಂದು ಎನ್.ಎಸ್. ಬೋಸರಾಜು ಸೂಚಿಸಿದರು.

ಕಾಮಗಾರಿಯ ಗುಣಮಟ್ಟಕ್ಕೂ ಆದ್ಯತೆ ನೀಡಬೇಕು. ವಿವಿಧ ಇಲಾಖೆಗಳ ಕಚೇರಿಗಳು ಒಂದೇ ಕಟ್ಟಡದಲ್ಲಿ ಕಾರ್ಯನಿರ್ವಹಿಸುವುದರಿಂದ ಸಾರ್ವಜನಿಕರು ತಮ್ಮ ಕೆಲಸಗಳಿಗೆ ಹಲವು ಕಡೆ ಅಲೆದಾಡುವ ಅವಶ್ಯಕತೆ ಕಡಿಮೆಯಾಗಲಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಜಿ. ಹಂಪಯ್ಯ ನಾಯಕ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಗಫೂರ್ ಸಾಬ್, ಪಂಚ ಗ್ಯಾರಂಟಿಗಳ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ಎ. ಬಾಲಸ್ವಾಮಿ ಕೊಡ್ಲಿ, ಸೈಯದ್ ಖಾಲಿದ್ ಖಾದ್ರಿ, ಹನುಮೇಶ್ ಮದ್ಲಾಪೂರ್, ರಾಜಾ ಸುಭಾಷ್ ಚಂದ್ರ ನಾಯಕ್, ಮಹೇಶ್ ಗೌಡ ಗವಿಗಟ್, ಮಹಾಂತೇಶ ಸ್ವಾಮಿ, ಸತ್ತಾರ್ ಬಂಗ್ಲೆವಾಲೆ, ಕಾಮೇಶ್, ಹಂಪಯ್ಯ ನಾಯಕ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೆ-ಸೆಟ್ ಪರೀಕ್ಷಾ ಸಿದ್ಧತೆಗೆ ಅ.4ರಂದು ವಿಶೇಷ ಕಾರ್ಯಾಗಾರ



ರಾಯಚೂರು, ಸೆ.28: ಕರ್ನಾಟಕ ರಾಜ್ಯ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್)-2026ಕ್ಕೆ ಸಜ್ಜಾಗುತ್ತಿರುವ ಅಭ್ಯರ್ಥಿಗಳಿಗೆ ನೆರವಾಗುವ ಉದ್ದೇಶದಿಂದ ಅಶ್ವಮೇಧ ಫೌಂಡೇಶನ್ ವತಿಯಿಂದ ಅ.4ರಂದು ಕೆ-ಸೆಟ್ ಪತ್ರಿಕೆ-1ರ ಸಾಮಾನ್ಯ ಅಧ್ಯಯನ ಕುರಿತು ಒಂದು ದಿನದ ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಫೌಂಡೇಶನ್ ಅಧ್ಯಕ್ಷ ರಮೇಶ್ ಉಪ್ರಾಳ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ವೃತ್ತದ ಪಕ್ಕದಲ್ಲಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಸಭಾಂಗಣದಲ್ಲಿ ಕಾರ್ಯಾಗಾರ ನಡೆಯಲಿದೆ ಎಂದರು.

ಕೆ-ಸೆಟ್ ಪತ್ರಿಕೆ-1ರ ವಿಷಯಗಳನ್ನು ಸುಲಭವಾಗಿ ಅರ್ಥೈಸಿಕೊಳ್ಳಲು ಹಾಗೂ ಪರೀಕ್ಷೆಯನ್ನು ಪರಿಣಾಮಕಾರಿಯಾಗಿ ಎದುರಿಸಲು ಅಭ್ಯರ್ಥಿಗಳಿಗೆ ಕಾರ್ಯಾಗಾರದಲ್ಲಿ ಮಾರ್ಗದರ್ಶನ ನೀಡಲಾಗುವುದು. ಅನುಭವಿ ಸಂಪನ್ಮೂಲ ವ್ಯಕ್ತಿ ಹನುಮಂತ ನಾಯಕ (ಎಂ.ಎ., ನೆಟ್, ಎಂಎಲ್‌ಐಎಸ್‌ಸಿ, ಜೆಆರ್‌ಎಫ್/ನೆಟ್, ಕೆ-ಸೆಟ್, ಪಿಎಚ್.ಡಿ.) ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದು ತಿಳಿಸಿದರು.

ಪರೀಕ್ಷೆಯ ಸ್ವರೂಪ, ಪತ್ರಿಕೆ-1ರಲ್ಲಿ ಗಮನಹರಿಸಬೇಕಾದ ಪ್ರಮುಖ ವಿಷಯಗಳು, ಪ್ರಶ್ನೆಗಳನ್ನು ಎದುರಿಸುವ ವಿಧಾನ ಹಾಗೂ ಉತ್ತಮ ಅಂಕ ಗಳಿಸಲು ಅನುಸರಿಸಬೇಕಾದ ಸಿದ್ಧತಾ ಕ್ರಮಗಳ ಕುರಿತು ಅಭ್ಯರ್ಥಿಗಳಿಗೆ ಮಾಹಿತಿ ನೀಡಲಾಗುವುದು ಎಂದರು.

ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಪದವಿ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಸಹಾಯಕ ಪ್ರಾಧ್ಯಾಪಕ ಹುದ್ದೆಗೆ ಅರ್ಹತೆ ಪಡೆಯುವ ನಿಟ್ಟಿನಲ್ಲಿ ಕೆ-ಸೆಟ್ ಪರೀಕ್ಷೆ ಪ್ರಮುಖವಾಗಿದೆ. ಹೀಗಾಗಿ ರಾಯಚೂರು ಜಿಲ್ಲೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳ ಅಭ್ಯರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ದೊರೆಯಬೇಕು ಮತ್ತು ಈ ಭಾಗದಿಂದ ಹೆಚ್ಚಿನ ಅಭ್ಯರ್ಥಿಗಳು ಪರೀಕ್ಷೆಯಲ್ಲಿ ಅರ್ಹತೆ ಪಡೆಯಬೇಕು ಎಂಬ ಆಶಯದೊಂದಿಗೆ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಹೇಳಿದರು.

ಆಸಕ್ತ ಅಭ್ಯರ್ಥಿಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡು ಪರೀಕ್ಷಾ ತಯಾರಿಗೆ ಅಗತ್ಯವಾದ ಮಾಹಿತಿ ಹಾಗೂ ಮಾರ್ಗದರ್ಶನ ಪಡೆದುಕೊಳ್ಳಬೇಕು. ಭಾಗವಹಿಸುವ ಪ್ರತಿ ಅಭ್ಯರ್ಥಿಗೆ ₹100 ನೋಂದಣಿ ಶುಲ್ಕ ನಿಗದಿಪಡಿಸಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕೆ. ಮೌಲಪ್ಪ, ಅನಂತ್ ರೆಡ್ಡಿ, ಜಾನ್ಸನ್, ಅಂಜಿ ಬಾಬು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಂಪ್‌ಸೆಟ್‌ಗಳಿಗೆ ನಿರಂತರ 10 ತಾಸು ವಿದ್ಯುತ್ ನೀಡಲು ನೀರಮಾನ್ವಿ ರೈತರ ಆಗ್ರಹ



ಮಾನ್ವಿ: ಬರಗಾಲದ ಹಿನ್ನೆಲೆಯಲ್ಲಿ ಬೆಳೆಗಳನ್ನು ಉಳಿಸಿಕೊಳ್ಳಲು ಪರದಾಡುತ್ತಿರುವ ತಾಲೂಕಿನ ನೀರಮಾನ್ವಿ ಗ್ರಾಮದ ರೈತರ ಪಂಪ್‌ಸೆಟ್‌ಗಳಿಗೆ ಪ್ರತಿದಿನ ನಿರಂತರವಾಗಿ 10 ತಾಸು ವಿದ್ಯುತ್ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರೈತರು ತಹಶೀಲ್ದಾರ್ ಕಚೇರಿಯಲ್ಲಿ ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ರೈತ ಜೆಲ್ಲಿ ಆಂಜನೇಯ್ಯ ಮಾತನಾಡಿ, ಬರಗಾಲದ ಪರಿಣಾಮ ಸಮರ್ಪಕವಾಗಿ ಮಳೆಯಾಗದೆ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದೆ. ಜಮೀನುಗಳಿಗೆ ಕಾಲುವೆ ನೀರು ಸಹ ದೊರೆಯದ ಕಾರಣ ಗ್ರಾಮದ ಬಹುತೇಕ ರೈತರು ತಮ್ಮ ಬೆಳೆಗಳನ್ನು ಉಳಿಸಿಕೊಳ್ಳಲು ಕೊಳವೆಬಾವಿಗಳ ನೀರನ್ನೇ ಅವಲಂಬಿಸಿದ್ದಾರೆ. ಆದರೆ ಜೆಸ್ಕಾಂನಿಂದ ಕೃಷಿ ಪಂಪ್‌ಸೆಟ್‌ಗಳಿಗೆ ಪ್ರತಿದಿನ ನಿಗದಿತ ಅವಧಿಗೆ ಸಮರ್ಪಕವಾಗಿ ವಿದ್ಯುತ್ ಪೂರೈಕೆಯಾಗದ ಕಾರಣ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ತಿಳಿಸಿದರು.

ಈಗಾಗಲೇ ಮಳೆ ಹಾಗೂ ಕಾಲುವೆ ನೀರಿನ ಕೊರತೆಯಿಂದ ಬೆಳೆಗಳು ಒಣಗುವ ಆತಂಕ ಎದುರಾಗಿದೆ. ಇಂತಹ ಸಂದರ್ಭದಲ್ಲಿ ಕೊಳವೆಬಾವಿಗಳ ಮೂಲಕ ನೀರು ಹಾಯಿಸಲು ಅಗತ್ಯವಾದ ವಿದ್ಯುತ್ ಕೂಡ ಸಮರ್ಪಕವಾಗಿ ದೊರೆಯದಿದ್ದರೆ ಬೆಳೆಗಳನ್ನು ಉಳಿಸಿಕೊಳ್ಳುವುದು ಕಷ್ಟವಾಗಲಿದೆ. ಆದ್ದರಿಂದ ರೈತರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ಪಂಪ್‌ಸೆಟ್‌ಗಳಿಗೆ ನಿರಂತರವಾಗಿ 10 ತಾಸು ವಿದ್ಯುತ್ ಪೂರೈಸಲು ಜೆಸ್ಕಾಂ ಅಧಿಕಾರಿಗಳಿಗೆ ತಾಲೂಕು ಆಡಳಿತ ಸೂಕ್ತ ನಿರ್ದೇಶನ ನೀಡಬೇಕು ಎಂದು ಆಗ್ರಹಿಸಿದರು.

ಬೇಡಿಕೆಗೆ ಸ್ಪಂದಿಸದಿದ್ದರೆ ನೀರಮಾನ್ವಿ ಗ್ರಾಮದ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದಿಂದ ಮಾನ್ವಿ ತಹಶೀಲ್ದಾರ್ ಕಚೇರಿವರೆಗೆ ನೂರಾರು ರೈತರು ಅರೆಬೆತ್ತಲೆ ಮೆರವಣಿಗೆ ನಡೆಸಿ ಪ್ರತಿಭಟನೆ ಮಾಡಲಾಗುವುದು. ನಂತರದ ಹಂತದಲ್ಲಿ ನೀರಮಾನ್ವಿ ಗ್ರಾಮದ ಸಮೀಪ ರಸ್ತೆ ತಡೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ನೀರಮಾನ್ವಿ ಗ್ರಾಮದ ರೈತರಾದ ಶ್ರೀರಾಮುಲುಗೌಡ, ಜೆ. ಭೀಮರಾಯ, ಲಿಂಗಪ್ಪ ಕನ್ನೇರಿ, ರಮೇಶ, ಚಿದಾನಂದ, ಮಹೇಶ್, ಮಲ್ಲಿಕಾರ್ಜುನ, ಶಿವರಾಜ, ಬಂದೇನವಾಜ್, ವೀರನಗೌಡ, ರವಿ ಅಟ್ಲೂರು, ರಂಗಪ್ಪ, ಶಿವಕುಮಾರ, ಮುದುಕಪ್ಪ ಆಚಾರ್, ಬೂದೆಪ್ಪ, ಮಲ್ಲಪ್ಪ ಪೂಜಾರಿ, ಉಸ್ಮಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಶೋಕ್ ವಿ. ಕರಡಕಲ್ ಅವರಿಗೆ ತಾಲೂಕು ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ



ಲಿಂಗಸುಗೂರು: ಪಟ್ಟಣದ ವಿಜಯ ಮಹಾಂತೇಶ್ವರ ಮಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಟ್ಟಿ ಚಿನ್ನದ ಗಣಿ ವಿನಾಯಕ ವಿದ್ಯಾ ಸಂಸ್ಥೆಯ ದೈಹಿಕ ಶಿಕ್ಷಣ ಶಿಕ್ಷಕ ಅಶೋಕ್ ವಿ. ಕರಡಕಲ್ ಅವರಿಗೆ ತಾಲೂಕು ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಲಾಯಿತು.

ರಾಯಚೂರು ಜಿಲ್ಲಾ ವಿವಿಧ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ (ರಿ.) ವತಿಯಿಂದ ಆಯೋಜಿಸಲಾಗಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅಶೋಕ್ ವಿ. ಕರಡಕಲ್ ಅವರ ಶೈಕ್ಷಣಿಕ ಸೇವೆ ಹಾಗೂ ಸಾಧನೆಗಳನ್ನು ಗುರುತಿಸಿ ಗೌರವಿಸಲಾಯಿತು.

ವಿನಾಯಕ ವಿದ್ಯಾ ಸಂಸ್ಥೆಯ ಅಧ್ಯಕ್ಷರು ಅಶೋಕ್ ವಿ. ಕರಡಕಲ್ ಅವರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಿದರು. ಅವರ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿ, ಶಿಕ್ಷಕರು ಹಾಗೂ ಹಿತೈಷಿಗಳು ಅಭಿನಂದನೆ ಸಲ್ಲಿಸಿದರು.

## ಐಎಂಎ ರಾಯಚೂರು ಘಟಕಕ್ಕೆ ನೂತನ ಸಾರಥ್ಯ: ಡಾ. ಬಸವರಾಜ ಎಂ. ಪಾಟೀಲ್ ಅಧ್ಯಕ್ಷರು



ರಾಯಚೂರು: ಇಂಡಿಯನ್ ಮೆಡಿಕಲ್ ಅಸೋಸಿಯೇಷನ್ (ಐಎಂಎ) ರಾಯಚೂರು ಘಟಕದ 202627ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ನಡೆದಿದೆ.

ಅಧ್ಯಕ್ಷರಾಗಿ ಡಾ. ಬಸವರಾಜ ಎಂ. ಪಾಟೀಲ್, ಉಪಾಧ್ಯಕ್ಷರಾಗಿ ಡಾ. ವಿಜಯಶಂಕರ್, ಗೌರವ ಕಾರ್ಯದರ್ಶಿಯಾಗಿ ಡಾ. ಪವನ್ ಕಲ್ಲಿಮಠ, ಖಜಾಂಚಿಯಾಗಿ ಡಾ. ಅರುಣ್ ಮಸ್ಕಿ, ಜಂಟಿ ಕಾರ್ಯದರ್ಶಿಯಾಗಿ ಡಾ. ವೆಂಕಟೇಶ್ ನಾಯಕ್ ಹಾಗೂ ಸಹಾಯಕ ಕಾರ್ಯದರ್ಶಿಯಾಗಿ ಡಾ. ನೇಹಾ ಸುಖಾನಿ ಆಯ್ಕೆಯಾಗಿದ್ದಾರೆ.

ನೂತನ ಪದಾಧಿಕಾರಿಗಳಿಗೆ ವೈದ್ಯಕೀಯ ವಲಯದ ಗಣ್ಯರು, ಸಹೋದ್ಯೋಗಿಗಳು ಹಾಗೂ ಹಿತೈಷಿಗಳು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿ, ಅವರ ನಾಯಕತ್ವದಲ್ಲಿ ಐಎಂಎ ರಾಯಚೂರು ಘಟಕವು ಇನ್ನಷ್ಟು ಉತ್ತಮ ಸೇವೆ, ಸಂಘಟನಾ ಬಲವರ್ಧನೆ ಹಾಗೂ ವೈದ್ಯಕೀಯ ಕ್ಷೇತ್ರದ ಹಿತಾಸಕ್ತಿಗಾಗಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲಿ ಎಂದು ಶುಭ ಹಾರೈಸಿದ್ದಾರೆ.

## ಪುರಾತನ ಬಾವಿಯ ಕಸ ತೆರವು ಮಾಡಿ ಗಣೇಶ ವಿಸರ್ಜಿಸಿದ ಬಾಲರಾಮ ಶಾಲೆ ಯುವಕರು



ರಾಯಚೂರು: ನಗರದ ವಿವಿಧ ಗಣೇಶ ಮೂರ್ತಿಗಳನ್ನು ಸಾಮಾನ್ಯವಾಗಿ ಖಾಸಭಾವಿಯಲ್ಲಿ ನೀರು ತುಂಬಿಸಿ ವಿಸರ್ಜಿಸಲಾಗುತ್ತದೆ. ಆದರೆ ಪಟೇಲ್ ರಸ್ತೆಯ ಬಾಲರಾಮ ಶಾಲೆಯ ಶುದ್ಧ ಮಣ್ಣಿನ ಗಣೇಶ ಮೂರ್ತಿಯನ್ನು ಸಂಪ್ರದಾಯದಂತೆ ಬಸನಭಾವಿ ವೃತ್ತದಲ್ಲಿರುವ ಶ್ರೀ ಮಾರುತಿ ದೇವಸ್ಥಾನದ ಹಿಂಭಾಗದ ಪುರಾತನ ಬಾವಿಯಲ್ಲಿ ವಿಸರ್ಜಿಸಲಾಯಿತು.

ಬಾವಿಯಲ್ಲಿ ನೀರಿದ್ದರೂ, ದೀರ್ಘಕಾಲದಿಂದ ಹೂಳೆತ್ತದ ಕಾರಣ ಪ್ಲಾಸ್ಟಿಕ್, ಕಸ-ಕಡ್ಡಿಗಳು ಹಾಗೂ ಇತರೆ ತ್ಯಾಜ್ಯ ತುಂಬಿಕೊಂಡಿದ್ದವು. ವಿಸರ್ಜನೆಗೆ ಬಂದ ಬಾಲರಾಮ ಶಾಲೆಯ ಗಣೇಶ ಸಮಿತಿಯ ಸೇವಕ ಯುವಕರು ತಮ್ಮ ಕೈಯಿಂದಲೇ ಕೊಳಚೆ ನೀರಿನೊಳಗೆ ಇಳಿದು ಪ್ಲಾಸ್ಟಿಕ್ ಹಾಗೂ ಕಸವನ್ನು ತೆರವುಗೊಳಿಸಿದರು.

ಬಾವಿಯಲ್ಲಿ ಲಭ್ಯವಿದ್ದ ನೀರಿನಲ್ಲೇ ಗಣೇಶ ಮೂರ್ತಿಯನ್ನು ವಿಸರ್ಜಿಸಿದ ಬಳಿಕ, ಮೂರ್ತಿ ಸಂಪೂರ್ಣವಾಗಿ ನೀರಿನಲ್ಲಿ ಮುಳುಗುವಂತೆ ಟ್ಯಾಂಕರ್ ಮೂಲಕ ನೀರು ತರಿಸಿ ಪೈಪ್‌ಗಳಿಂದ ಬಾವಿಗೆ ಹರಿಸಲಾಯಿತು.

ಪುರಾತನ ಮಹತ್ವ ಹೊಂದಿರುವ ಈ ಬಾವಿಯನ್ನು ಮಹಾನಗರ ಪಾಲಿಕೆ ಸಮರ್ಪಕವಾಗಿ ಹೂಳೆತ್ತಿ ಸ್ವಚ್ಛಗೊಳಿಸಿದರೆ, ಸಾರ್ವಜನಿಕ ಬಳಕೆಗೆ ನೀರು ಲಭ್ಯವಾಗುವ ಸಾಧ್ಯತೆ ಇದೆ ಎಂದು ಸ್ಥಳೀಯರು ಅಭಿಪ್ರಾಯಪಟ್ಟಿದ್ದಾರೆ. ಬಾವಿಯ ಸ್ವಚ್ಛತೆ ಹಾಗೂ ಸಂರಕ್ಷಣೆಗೆ ಪಾಲಿಕೆ ಶೀಘ್ರ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

## ಹಟ್ಟಿಯಲ್ಲಿ ಹುತಾತ್ಮ ಭಗತ್ ಸಿಂಗ್ ಜಯಂತಿ ಆಚರಣೆ



ಹಟ್ಟಿ ಚಿನ್ನದ ಗಣಿ: ಪಟ್ಟಣದ ದಿ. ಕಾಮ್ರೇಡ್ ಅರವಿಂದ್ ಮಳೆಬನ್ನೂರು ಗ್ರಂಥಾಲಯದಲ್ಲಿ ಮಹಾನ್ ಕ್ರಾಂತಿಕಾರಿ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಹುತಾತ್ಮ ಭಗತ್ ಸಿಂಗ್ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಲಾಯಿತು. ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಭಗತ್ ಸಿಂಗ್ ಅವರ ಹೋರಾಟ, ತ್ಯಾಗ, ಬಲಿದಾನ ಹಾಗೂ ಕ್ರಾಂತಿಕಾರಿ ವಿಚಾರಧಾರೆಗಳನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.

ಭಗತ್ ಸಿಂಗ್ ಅವರ ದೇಶಪ್ರೇಮ, ಧೈರ್ಯ ಮತ್ತು ಹೋರಾಟದ ಮನೋಭಾವ ಇಂದಿನ ಯುವ ಪೀಳಿಗೆಗೆ ಸ್ಫೂರ್ತಿಯಾಗಬೇಕು. ದೇಶಕ್ಕಾಗಿ ಅವರು ಕಂಡ ಕನಸುಗಳು ಹಾಗೂ ಪ್ರತಿಪಾದಿಸಿದ ಆದರ್ಶಗಳನ್ನು ಯುವಜನರು ಅರಿತುಕೊಂಡು ಸಮಾಜಮುಖಿ ಚಿಂತನೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಗಣ್ಯರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಕಾ. ಜಿ.ಎಸ್. ಹನುಮಂತ, ಕಾ. ತಿಪ್ಪಣ್ಣ ಮಚನೂರು, ಗಂಗಪ್ಪ ಶಾಖೋದಿ, ಪೆಚಲಮ್ಮ, ಬಾಬು ಸಾಗರ್, ಚಂದ್ರಶೇಖರ್ ಚಿತ್ರನಾಳ್, ಮೌನುದ್ದೀನ್ ಬೂದಿದಿನಾಳ್, ರಂಗನಾಥ, ನಾಗರಾಜ್, ಪಾಮಣ್ಣ, ಕರಿಯಪ್ಪ, ಸುಂದರ್ ಸೇರಿದಂತೆ ಎಐಟಿಯುಸಿ ಕಾರ್ಮಿಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಪಬ್ಲಿಕ್ ಶಾಲೆಯಲ್ಲಿ ಭಗತ್ ಸಿಂಗ್ ಜಯಂತಿ ಆಚರಣೆ



ಮಾನ್ವಿ: ನಗರದ ಚೀಕಲಪರ್ವಿ ರಸ್ತೆಯಲ್ಲಿರುವ ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಸ್ವಾತಂತ್ರ್ಯ ಹೋರಾಟಗಾರ ಶಹೀದ ಭಗತ್ ಸಿಂಗ್ ಅವರ ಜಯಂತಿಯನ್ನು ಗೌರವಪೂರ್ವಕವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕ ನರಸಿಂಹಮೂರ್ತಿ ದೇಸಾಯಿ ಅವರು ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿ, ಭಗತ್ ಸಿಂಗ್ ಅವರ ಕೆಚ್ಚೆದೆಯ ಹೋರಾಟವು ಸ್ವಾತಂತ್ರ್ಯ ಚಳವಳಿಗೆ ಹೊಸ ಚೈತನ್ಯ ನೀಡಿತು. ಬ್ರಿಟಿಷರ ವಿರುದ್ಧ ಹೋರಾಡಿದ ಅವರು ಅತ್ಯಂತ ಚಿಕ್ಕ ವಯಸ್ಸಿನಲ್ಲಿಯೇ ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದರು. ಅವರ ದೇಶಪ್ರೇಮ, ಧೈರ್ಯ ಮತ್ತು ತ್ಯಾಗ ಯುವಪೀಳಿಗೆಗೆ ಸದಾ ಪ್ರೇರಣೆಯಾಗಬೇಕು ಎಂದು ಹೇಳಿದರು. ಕನ್ನಡ ಶಿಕ್ಷಕ ಮೋಹನ್ ಸಿಂಗ್ ಮಾತನಾಡಿ, ವಿದ್ಯಾರ್ಥಿಗಳು ಭಗತ್ ಸಿಂಗ್ ಅವರಂತಹ ಸ್ವಾತಂತ್ರ್ಯ ಹೋರಾಟಗಾರರ ಜೀವನ ಚರಿತ್ರೆಯನ್ನು ತಿಳಿದುಕೊಳ್ಳಬೇಕು. ಅವರಲ್ಲಿದ್ದ ದೇಶಪ್ರೇಮ, ಧೈರ್ಯ, ತ್ಯಾಗ ಹಾಗೂ ಸೇವಾ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಂಡು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಲು ಮುಂದಾಗಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಶಾಲಾ ಕಾರ್ಯದರ್ಶಿ ಸೈಯದ್ ಮುಸ್ತಬ ಖಾದ್ರಿ, ಮುಖ್ಯಗುರು ನಾಗರತ್ನ ದೇಸಾಯಿ, ದೈಹಿಕ ಶಿಕ್ಷಣ ಶಿಕ್ಷಕ ಅಂಬಣ್ಣ ನಾಯಕ್ ಸೇರಿದಂತೆ ಶಿಕ್ಷಕರು, ಶಿಕ್ಷಕಿಯರು ಹಾಗೂ ಪಾಲಕರು ಭಗತ್ ಸಿಂಗ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K